ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 168 RNI Number : KNKAN/25/A2770 26-06-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :168 ರಾಯಚೂರು 26-06-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ತುಂಗಭದ್ರಕ್ಕೆ ಹೊಸ ಕಳೆ; ನೂತನ 33 ಕ್ರೆಸ್ಟ್ ಗೇಟ್‌ಗಳ ಲೋಕಾರ್ಪಣೆ

ಹೊಸಪೇಟೆ,

ತುಂಗಭದ್ರಾ ಜಲಾಶಯದ ಇತಿಹಾಸದಲ್ಲಿ ಗುರುವಾರ ಮಹತ್ವದ ದಿನವಾಗಿ ದಾಖಲಾಗಿದೆ. ಸುಮಾರು 73 ವರ್ಷಗಳ ಬಳಿಕ ಅಣೆಕಟ್ಟಿನ ಹಳೆಯ ಕ್ರೆಸ್ಟ್ ಗೇಟ್‌ಗಳನ್ನು ಬದಲಾಯಿಸಿ ಅಳವಡಿಸಲಾದ ನೂತನ 33 ಕ್ರೆಸ್ಟ್ ಗೇಟ್‌ಗಳನ್ನು ಲೋಕಾರ್ಪಣೆಗೊಳಿಸಲಾಗಿದೆ.

ಮುನಿರಾಬಾದ್ ಸಮೀಪದ ತುಂಗಭದ್ರಾ ಅಣೆಕಟ್ಟೆಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್, ಕರ್ನಾಟಕ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಹಾಗೂ ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಭಾಗವಹಿಸಿದ್ದರು.

ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಹಾಗೂ ಕೇಂದ್ರ ಸಚಿವರು ಒಂದೇ ವೇದಿಕೆಯಲ್ಲಿ ಸೇರಿದ್ದು ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿತ್ತು.

ಅಣೆಕಟ್ಟಿನ 18ನೇ ಗೇಟ್ ಸಮೀಪ ನಡೆದ ಪೂಜಾ ವಿಧಿಗಳ ಬಳಿಕ ನೂತನ ಗೇಟ್‌ಗಳ ಲೋಕಾರ್ಪಣೆ ನೆರವೇರಿತು. ಡಿ.ಕೆ. ಶಿವಕುಮಾರ್ ಅವರು



18ನೇ ಗೇಟ್‌ಗೆ ಚಾಲನೆ ನೀಡಿದರೆ, ಸಿ.ಆರ್. ಪಾಟೀಲ್ ಅವರು 17ನೇ ಗೇಟ್ ಉದ್ಘಾಟಿಸಿದರು.

ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು 19ನೇ ಗೇಟ್‌ನ್ನು ಲೋಕಾರ್ಪಣೆ ಮಾಡಿದ್ದು, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ 20ನೇ ಗೇಟ್‌ಗೆ ಚಾಲನೆ ನೀಡಿದರು.

ಬೆಳಿಗ್ಗೆ 11.15ಕ್ಕೆ ಕಾರ್ಯಕ್ರಮ ನಿಗದಿಯಾಗಿದ್ದರೂ, ಸುಮಾರು ಒಂದೂಕಾಲು ಗಂಟೆ ವಿಳಂಬವಾಗಿ ಉದ್ಘಾಟನೆ ನಡೆಯಿತು. ಬಳಿಕ ನಾಲ್ವರು ನಾಯಕರು ಕೈಎತ್ತಿ ಒಗ್ಗಟ್ಟು ಪ್ರದರ್ಶಿಸಿ, ತುಂಗಭದ್ರಾ ಜಲಾಶಯ ಮತ್ತು ನೀರಿನ ಹಂಚಿಕೆ ಸಂಬಂಧಿತ ವಿಷಯಗಳಲ್ಲಿ ಮುಂದೆಯೂ ಸಹಕಾರದಿಂದ ಕಾರ್ಯನಿರ್ವಹಿಸುವ ಸಂದೇಶ ನೀಡಿದರು.

2024ರ ಆಗಸ್ಟ್‌ನಲ್ಲಿ ತುಂಗಭದ್ರಾ ಡ್ಯಾಂನ 19ನೇ ಕ್ರೆಸ್ಟ್ ಗೇಟ್ ಕೊಚ್ಚಿ ಹೋಗಿದ್ದ ಘಟನೆ ರಾಜ್ಯ ಮಾತ್ರವಲ್ಲದೆ ದೇಶದ ಗಮನ ಸೆಳೆದಿತ್ತು. ಈ ಘಟನೆ ಬಳಿಕ ಡ್ಯಾಂ ಸುರಕ್ಷತಾ ತಜ್ಞರ ತಂಡ ಹಾಗೂ ಕೇಂದ್ರ ಜಲಶಕ್ತಿ ಆಯೋಗದಿಂದ ಸಮಗ್ರ ಪರಿಶೀಲನೆ ನಡೆಸಲಾಗಿತ್ತು. ಅದರ ಆಧಾರದ ಮೇಲೆ ಹಳೆಯ ಹಾಗೂ ಸವಕಳಿಗೊಂಡಿದ್ದ ಒಟ್ಟು 33 ಕ್ರೆಸ್ಟ್ ಗೇಟ್‌ಗಳನ್ನು ಬದಲಾಯಿಸಲು ಸೂಚನೆ ನೀಡಲಾಗಿತ್ತು.

ಸುಮಾರು ರೂ.51 ಕೋಟಿ ವೆಚ್ಚದಲ್ಲಿ ನೂತನ ಗೇಟ್‌ಗಳನ್ನು ಅಳವಡಿಸಲಾಗಿದ್ದು, 1953ರಲ್ಲಿ ಅಳವಡಿಸಿದ್ದ ಹಳೆಯ ಗೇಟ್‌ಗಳಿಗೆ ಬದಲಾಗಿ ಇವು ಸ್ಥಾಪಿಸಲ್ಪಟ್ಟಿವೆ. ಪ್ರತಿಯೊಂದು ಗೇಟ್ ಸುಮಾರು 20 ಅಡಿ ಎತ್ತರ, 60 ಅಡಿ ಅಗಲ ಮತ್ತು 48.50 ಟನ್ ತೂಕ ಹೊಂದಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ತುಂಗಭದ್ರಾ ಜಲಾಶಯಕ್ಕೆ ಸಂಬಂಧಿಸಿದಂತೆ ಮೂರು ರಾಜ್ಯಗಳ ಸಹಕಾರದ ಸಂಕೇತವಾಗಿ ಈ ಲೋಕಾರ್ಪಣೆ ಕಾರ್ಯಕ್ರಮ ಗಮನಸೆಳೆದಿದ್ದು, ಜಲಾಶಯದ ಸುರಕ್ಷತೆ ಮತ್ತು ನಿರ್ವಹಣೆಯಲ್ಲಿ ಇದು ಮಹತ್ವದ ಹೆಜ್ಜೆಯಾಗಿ ಪರಿಗಣಿಸಲಾಗಿದೆ.

ವಸಂತಕುಮಾರರಿಗೆ ಸಂಪುಟ ದರ್ಜೆ ಸಚಿವ ಸ್ಥಾನ ನೀಡಿ: ವಿಜಯರಾಣಿ ಸಿರಿವಾರ ಆಗ್ರಹ

ಕಲ್ಯಾಣ ಕರ್ನಾಟಕ ಭಾಗಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡುವಂತೆ ಮನವಿ

ಸಿರವಾರ,ಜೂ.25-

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ನೇತೃತ್ವದ ರಾಜ್ಯ ಸಚಿವ ಸಂಪುಟದಲ್ಲಿ ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ ಅವರಿಗೆ ಮುಂದಿನ ಸಚಿವ ಸಂಪುಟ ವಿಸ್ತರಣೆಯಲ್ಲಿ ಸಂಪುಟ ದರ್ಜೆಯ ಸಚಿವ ಸ್ಥಾನ ನೀಡಬೇಕು ಎಂದು ಮಹಾಶಕ್ತಿ ಮಹಿಳಾ ಸಬಲೀಕರಣ ಸಂಘದ ಸಂಸ್ಥಾಪಕರಾದ ವಿಜಯ ರಾಣಿ ಸಿರಿವಾರ ಒತ್ತಾಯಿಸಿದರು.

ಈ ಕುರಿತು ಮಾತನಾಡಿದ ಅವರು, ರಾಯಚೂರು ಜಿಲ್ಲೆಯವರಾದ ಎ. ವಸಂತಕುಮಾರ ಅವರು ಸರಳತೆ, ಪ್ರಾಮಾಣಿಕತೆ ಹಾಗೂ ಶಿಸ್ತಿನ ರಾಜಕಾರಣಿಯಾಗಿ ಗುರುತಿಸಿಕೊಂಡಿದ್ದು, ಸುಮಾರು ನಾಲ್ಕು



ದಶಕಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಸೇವೆ ಸಲ್ಲಿಸಿದ್ದಾರೆ ಎಂದು ಹೇಳಿದರು. ಅವರು ಎರಡು ಬಾರಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದು, ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಜವಾಬ್ದಾರಿ ನಿರ್ವಹಿಸಿದ್ದಾರೆ. ಜೊತೆಗೆ ಬಾಗಲಕೋಟೆ ಉಪ ಚುನಾವಣೆ ಹಾಗೂ ತಮಿಳುನಾಡಿನ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಪಕ್ಷದ ಉಸ್ತುವಾರಿಯಾಗಿ ಕೆಲಸ ಮಾಡಿ ಪಕ್ಷದ ಗೆಲುವಿಗೆ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

''ಎ. ವಸಂತಕುಮಾರ ಅವರು ವಿಧಾನ ಪರಿಷತ್ ಸದಸ್ಯರಾಗಿ ಹಲವು ವರ್ಷಗಳಿಂದ ಜನಪರ ಕಾರ್ಯಗಳನ್ನು ಮಾಡಿಕೊಂಡು ಬಂದಿದ್ದಾರೆ. ರಾಜ್ಯದ ಸಮಗ್ರ ಅಭಿವೃದ್ಧಿ, ಸಾಮಾಜಿಕ ನ್ಯಾಯ ಹಾಗೂ ಆಡಳಿತದಲ್ಲಿ ಅವರಿಗೆ ಇರುವ ಅನುಭವವನ್ನು ರಾಜ್ಯದ ಹಿತಕ್ಕಾಗಿ ಬಳಸಿಕೊಳ್ಳಬೇಕು. ಅವರಿಗೆ ಸಚಿವ ಸ್ಥಾನ ನೀಡಿದರೆ ಕಲ್ಯಾಣ ಕರ್ನಾಟಕ ಭಾಗಕ್ಕೆ ನ್ಯಾಯ ದೊರೆಯುವುದರ ಜೊತೆಗೆ ಅಭಿವೃದ್ಧಿ ಕಾರ್ಯಗಳಿಗೆ ಹೊಸ



ವೇಗ ಸಿಗಲಿದೆ'' ಎಂದು ಹೇಳಿದರು.

ಮುಖ್ಯಮಂತ್ರಿಗಳು ಹಾಗೂ ಪಕ್ಷದ ವರಿಷ್ಠರು ಜನರ ಅಭಿಪ್ರಾಯಕ್ಕೆ ಸ್ಪಂದಿಸಿ ಎ. ವಸಂತಕುಮಾರ ಅವರಿಗೆ ಸೂಕ್ತ ಖಾತೆಯೊಂದಿಗೆ ಸಚಿವ ಸ್ಥಾನ ನೀಡಬೇಕು. ಇದು ಪಕ್ಷದ ಸಂಘಟನೆ ಹಾಗೂ ರಾಜ್ಯದ ಅಭಿವೃದ್ಧಿಗೆ ಪೂರಕವಾಗಲಿದೆ ಎಂದು ವಿಜಯರಾಣಿ ಸಿರಿವಾರ ಒತ್ತಾಯಿಸಿದರು.

ವಾಲ್ಮೀಕಿ ನಾಯಕ ಸಮಾಜಕ್ಕೆ ನಾಲ್ಕು ಸಚಿವ ಸ್ಥಾನ ನೀಡಲು ಆಗ್ರಹ

ರಾಯಚೂರು,ಜೂ.25-

ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ವಾಲ್ಮೀಕಿ ನಾಯಕ ಸಮಾಜಕ್ಕೆ ಸಮರ್ಪಕ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಿ, ಖಾಲಿ ಇರುವ ಸಚಿವ ಸ್ಥಾನಗಳಲ್ಲಿ ಕನಿಷ್ಠ ನಾಲ್ಕು ಸಚಿವ ಸ್ಥಾನಗಳನ್ನು ನೀಡಬೇಕು ಎಂದು ಹೈದರಾಬಾದ್ ಕರ್ನಾಟಕ ಪ್ರದೇಶ ವಾಲ್ಮೀಕಿ ನಾಯಕ ಸಂಘದ ವಿಭಾಗೀಯ ಕಾರ್ಯ ದರ್ಶಿ ಎನ್. ರಘುವೀರ ನಾಯಕ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ 15 ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರಗಳ ಪೈಕಿ 14 ಕ್ಷೇತ್ರಗಳಲ್ಲಿ ಹಾಗೂ ಒಂದು ಸಾಮಾನ್ಯ ಕ್ಷೇತ್ರದಲ್ಲಿ ವಾಲ್ಮೀಕಿ ನಾಯಕ ಸಮುದಾಯದ ಅಭ್ಯರ್ಥಿ



ಗಳು ಕಾಂಗ್ರೆಸ್ ಪಕ್ಷದಿಂದ ಗೆಲುವು ಸಾಧಿಸಿದ್ದಾರೆ ಎಂದು ಹೇಳಿದರು. ಅಲ್ಲದೇ, ಮೂರು ಸಾಮಾನ್ಯ ಕ್ಷೇತ್ರಗಳಲ್ಲಿಯೂ ಸಮುದಾಯದ ಅಭ್ಯರ್ಥಿಗಳು ಶಾಸಕರಾಗಿ ಆಯ್ಕೆಯಾಗಿದ್ದು, ಒಟ್ಟು 18 ಮಂದಿ ವಾಲ್ಮೀಕಿ ನಾಯಕ ಸಮುದಾಯದ ಶಾಸಕರು ವಿಧಾನಸಭೆಯಲ್ಲಿ ಪ್ರತಿನಿಧಿಸುತ್ತಿದ್ದಾರೆ ಎಂದು ತಿಳಿಸಿದರು.

ರಾಜ್ಯದಲ್ಲಿ ವಾಲ್ಮೀಕಿ ನಾಯಕ ಸಮು ದಾಯವು ಪ್ರಬಲ ರಾಜ ಕೀಯ ಶಕ್ತಿಯಾಗಿ ಹೊರಹೊಮ್ಮಿ ದ್ದರೂ ಕಳೆದ ಮೂರು ವರ್ಷಗಳಿಂದ ಸಚಿವ ಸಂಪುಟದಲ್ಲಿ ಸಮುದಾಯಕ್ಕೆ ಸೂಕ್ತ ಸ್ಥಾನಮಾನ ದೊರೆಯದೇ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದರು.

ಈ ಹಿಂದೆ ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರಾಗಿದ್ದ . ಅವರ ರಾಜೀನಾಮೆಯ ಬಳಿಕ ತೆರವಾದ ಸ್ಥಾನಕ್ಕೆ ವಾಲ್ಮೀಕಿ ಸಮುದಾಯದ ಶಾಸಕರನ್ನು ನೇಮಕ ಮಾಡದಿರುವುದು ಸಮುದಾಯದ ಅಭಿವೃದ್ಧಿಗೆ ಹಿನ್ನಡೆಯಾಗಿದೆ ಎಂದು ಹೇಳಿದರು. ಹಾಗೆಯೇ ಸಹಕಾರ ಸಚಿವರಾಗಿದ್ದ . ಅವರ ರಾಜೀನಾಮೆಯ ಬಳಿಕವೂ ಸಮುದಾಯಕ್ಕೆ ಸಚಿವ ಸ್ಥಾನ ನೀಡದಿರುವುದು ಮತ್ತೊಂದು ಅನ್ಯಾಯವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರಸ್ತುತ ಸಚಿವ ಸಂಪುಟ ವಿಸ್ತರಣೆಯ ಚರ್ಚೆಗಳ ನಡುವೆ ಖಾಲಿ ಇರುವ ಸಚಿವ ಸ್ಥಾನಗಳಲ್ಲಿ ಕನಿಷ್ಠ ನಾಲ್ಕು ಸ್ಥಾನಗಳನ್ನು ವಾಲ್ಮೀಕಿ

3ನೇಯ ಪುಟಕ್ಕೆ

ಏಮ್ಸ್ ಹೋರಾಟ 1505 ದಿನಕ್ಕೆ



ರಾಯಚೂರು,ಜೂ.25-

ರಾಯಚೂರು ಜಿಲ್ಲಾ ಏಮ್ಸ್ ಹೋರಾಟ ಸಮಿತಿ ನಡೆಸುತ್ತಿರುವ ಅನಿರ್ದಿಷ್ಟ ಧರಣಿ ಸತ್ಯಾಗ್ರಹ ಇಂದಿಗೆ 1505ನೇ ದಿನಕ್ಕೆ ಮುಂದುವರೆದಿದೆ.

ಇಂದಿನ ಅನಿರ್ದಿಷ್ಟ ಧರಣಿ ಸತ್ಯಾಗ್ರಹದಲ್ಲಿ ಡಾ.ಬಸವರಾಜ್ ಕಳಸ , ಅಶೋಕ್ ಕುಮಾರ್ ಜೈನ್, ಎಸ್.ಮಾರಪ್ಪ ವಕೀಲರು, ಆರಿಫ್ ಮಿಯಾ ನೆಲೆಹಾಳ, ನರಸಪ್ಪ ಬಾಡಿಯಲ, ಜಗದೀಶ್ ಪೂರತಿಪ್ಪಿ ,ಜೈ ಭೀಮ್ ವಲ್ಲಭ, ಅಮರೇ ಗೌಡ ಪಾಟೀಲ್, ಎಸ್. ತಿಮ್ಮಾರೆಡ್ಡಿ, ಎಸ್. ಹನುಮಂತಪ್ಪ ,ಸಂತೋಷ್ ಕುಮಾರ್ ಮಿರ್ಜಾಪುರ, ಮಹೇಂದ್ರ ಸಿಂಗ್, ವೀರಭದ್ರಯ್ಯ ಸ್ವಾಮಿ, ವೆಂಕಯ್ಯ ಶೆಟ್ಟಿ ಹೊಸಪೇಟೆ, ಶ್ರೀನಿವಾಸ ನಾಗಲದಿನ್ನಿ, ಶ್ರೀನಿವಾಸ ಕಲ್ಲೂರ್ಕರ್, ಪ್ರಸನ್ನ ಆಲಮ್ಪಲ್ಲಿ , ಶ್ರೀನಿವಾಸ್ ಕಲವಲ ದೊಡ್ಡಿ, ಬಸವರಾಜ್ ಮಿರ್ಜಾಪುರ ಮುಂತಾದವರು ಭಾಗವಹಿಸಿದ್ದರು.

ವಾರ್ತಾ ಇಲಾಖೆಗೆ ಹೊಸ ಆಯುಕ್ತ: ಡಿಐಜಿ ಎಂ.ಎನ್. ಅನುಚೇತ್ ಅಧಿಕಾರ ಸ್ವೀಕಾರ

ಬೆಂಗಳೂರು,ಜೂ.25-

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೂತನ ಆಯುಕ್ತರಾಗಿ ಐಪಿಎಸ್ ಅಧಿಕಾರಿ ಎಂ.ಎನ್. ಅನುಚೇತ್ ಗುರುವಾರ ಅಧಿಕಾರ ಸ್ವೀಕರಿಸಿದರು.

ಇದುವರೆಗೆ ಇಲಾಖೆಯ ಆಯುಕ್ತರಾಗಿ ಕಾರ್ಯನಿರ್ವಹಿಸಿದ್ದ ಹಿರಿಯ ಐಪಿಎಸ್ ಅಧಿಕಾರಿ ಹೇಮಂತ್ ಎಂ. ನಿಂಬಾಳ್ಕರ್ ಅವರು ಅಧಿಕಾರ ಹಸ್ತಾಂತರಿಸಿದರು. ಈ ವೇಳೆ ಇಲಾಖೆಯ ಹಿರಿಯ ಅಧಿಕಾರಿಗಳು ನೂತನ ಆಯುಕ್ತರಿಗೆ ಶುಭ ಕೋರಿದರು.

ರಾಜ್ಯ ಸರ್ಕಾರವು ಎಂ.ಎನ್. ಅನುಚೇತ್ ಅವರಿಗೆ ವಾರ್ತಾ ಇಲಾಖೆಯ ಜೊತೆಗೆ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯ



ಆಯುಕ್ತರ ಹೆಚ್ಚುವರಿ ಜವಾಬ್ದಾರಿಯನ್ನೂ ವಹಿಸಿದೆ.

ಮೂಲತಃ ಕೋಲಾರ ಜಿಲ್ಲೆ ಜಿಲ್ಲೆಯವರಾದ ಅನುಚೇತ್ ಅವರು ಆರ್.ವಿ. ಇಂಜಿನಿಯರಿಂಗ್ ಕಾಲೇಜುಯಲ್ಲಿ 2006ರಲ್ಲಿ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಪದವಿ ಪೂರ್ಣಗೊಳಿಸಿದ್ದರು. ಬಳಿಕ ನಾಗರಿಕ ಸೇವೆಯತ್ತ ಮುಖ ಮಾಡಿ 2008ರ ಸಿವಿಲ್ ಸರ್ವಿಸ್ ಪರೀಕ್ಷೆಯಲ್ಲಿ ಸಾಧನೆ ಮಾಡಿ, 2009ರ ಕರ್ನಾಟಕ ಕೇಡರ್ ಐಪಿಎಸ್ ಅಧಿಕಾರಿಯಾಗಿ ಆಯ್ಕೆಯಾದರು.

ತಂತ್ರಜ್ಞಾನ ಆಧಾರಿತ ಆಡಳಿತ ಹಾಗೂ ಪೊಲೀಸ್ ವ್ಯವಸ್ಥೆಯಲ್ಲಿ ತಮ್ಮದೇ ಛಾಪು ಮೂಡಿಸಿರುವ ಅನುಚೇತ್ ಅವರು ಈ ಹಿಂದೆ ಪುತ್ತೂರಿನಲ್ಲಿ ಸಹಾಯಕ ಪೊಲೀಸ್ ಅಧೀಕ್ಷಕರಾಗಿ ಸೇವೆ ಆರಂಭಿಸಿದ್ದರು. ನಂತರ ಸಿಐಡಿ ವಿಭಾಗದ ಎಸ್ಪಿ, ಬೆಂಗಳೂರು ಕೇಂದ್ರ ವಿಭಾಗದ ಡಿಸಿಪಿ ಸೇರಿದಂತೆ ಹಲವು ಪ್ರಮುಖ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ್ದರು. ಇತ್ತೀಚೆಗೆ ಬೆಂಗಳೂರು ನಗರ ಜಂಟಿ ಪೊಲೀಸ್ ಆಯುಕ್ತ (ಸಂಚಾರ) ಹುದ್ದೆಯಲ್ಲಿ ಸೇವೆ ಸಲ್ಲಿಸಿದ್ದ ಅವರು ನಗರ ಸಂಚಾರ ನಿರ್ವಹಣೆಯಲ್ಲಿ ಕೃತಕ ಬುದ್ಧಿಮತ್ತೆ () ತಂತ್ರಜ್ಞಾನ ಬಳಕೆಗೆ ಒತ್ತು ನೀಡಿದ್ದರು. ಅಲ್ಲದೆ ಅತ್ಯುತ್ತಮ ತನಿಖಾ ಕಾರ್ಯಕ್ಕಾಗಿ ಕೇಂದ್ರ ಸರ್ಕಾರದ ಪ್ರತಿಷ್ಠಿತ ಗೃಹ ಸಚಿವರ ಪದಕಕ್ಕೂ ಭಾಜನರಾಗಿದ್ದರು.

ಅಧಿಕಾರ ಸ್ವೀಕಾರ ಕಾರ್ಯಕ್ರಮದಲ್ಲಿ ಇಲಾಖೆಯ ಜಂಟಿ ನಿರ್ದೇಶಕರಾದ ಮಂಜುನಾಥ ಡೊಳ್ಳಿನ್, ಸಿದ್ದೇಶ್ವರಪ್ಪ ಜಿಬಿ, ಸಿ.ಆರ್. ನವೀನ್ ಸೇರಿದಂತೆ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಪ್ರಧಾನಿ ಮೋದಿ ಭೇಟಿಯಾಗಿ ಮುಂದಿನ 4 ವರ್ಷ ಭಾರತದಲ್ಲಿ 48 ಬಿಲಿಯನ್ ಡಾಲರ್ ಹೂಡಿಕೆ ಘೋಷಿಸಿದ ಅಮೆಜಾನ್ ಸಿಇಒ

ನವದೆಹಲಿ: ಜಾಗತಿಕ ಟೆಕ್ ದೈತ್ಯ ಅಮೆಜಾನ್ ಕಂಪನಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ(ಸಿಇಒ) ಆ್ಯಂಡಿ ಜೆಸ್ಸಿ ಅವರು ಇಂದು ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ಮಹತ್ವದ ಮಾತುಕತೆ ನಡೆಸಿದ್ದು, ಬಳಿಕ ಮುಂದಿನ ನಾಲ್ಕು ವರ್ಷಗಳ ಅವಧಿಯಲ್ಲಿ ಕಂಪನಿಯು ಭಾರತದಲ್ಲಿ 48 ಬಿಲಿಯನ್ ಡಾಲರ್ ಬಂಡವಾಳ ಹೂಡಿಕೆ ಮಾಡಲಿದೆ ಎಂದು ಘೋಷಿಸಿದರು.

2010ರಿಂದಲೂ ಭಾರತದಲ್ಲಿ ನಾವು 40 ಬಿಲಿಯನ್ ಡಾಲರ್ ಹೂಡಿಕೆ ಮಾಡಿದ್ದೇವೆ. ಮತ್ತೆ 2026ರಿಂದ 2030ರ ವರೆಗೆ ಮತ್ತೆ 35 ಬಿಲಿಯನ್ ಡಾಲರ್ ಹೂಡಿಕೆ ಮಾಡುತ್ತೇವೆ ಎಂದು ಈ ಹಿಂದೆ ಘೋಷಿಸಿದ್ದೆವು. ಆದರೆ, ಇದೀಗ ಈ ಮೊತ್ತವನ್ನು 35 ಬಿಲಿಯನ್‌ಗೆ ಬದಲಾಗಿ 48 ಬಿಲಿಯನ್ ಯುಎಸ್ ಡಾಲರ್ ಹೂಡಿಕೆಗೆ ಹೆಚ್ಚಿಸಿದ್ದೇವೆ ಎಂದರು.

ನಮ್ಮ ಈ ಹೂಡಿಕೆಯು ಮಾರುಕಟ್ಟೆ ಉದ್ಯಮದ ನ್ಯಾಯಸಮ್ಮತ ಮೊತ್ತವಾಗಿದೆ. ಆದರೆ, 13 ಬಿಲಿಯನ್ ಡಾಲರ್ ಘೋಷಣೆಯು ಎಐ ಮತ್ತು ಕ್ಲೌಡ್‌ಗೆ ಗುರಿಯಾಗಿಸಿದೆ ಎಂದು ತಿಳಿಸಿದರು.

ಈ ಬಂಡವಾಳವು ನಿರ್ದಿಷ್ಟ ಡಿಜಿಟಲ್ ವ್ಯವಸ್ಥೆಗಳನ್ನು ಗುರಿಯಾಗಿರಿಸಿಕೊಂಡಿದೆ. ಕ್ಲೌಡ್ ಕಂಪ್ಯೂಟಿಂಗ್ ಮತ್ತು ಕೃತಕ ಬುದ್ಧಿಮತ್ತೆ ಅಭಿವೃದ್ಧಿಯನ್ನು ವೇಗಗೊಳಿಸಲು ನಿರ್ದಿಷ್ಟವಾಗಿ 13 ಬಿಲಿಯನ್ ಡಾಲರ್ ಸೇರಿಸಲಾಗಿದೆ. ಐದು ವರ್ಷಗಳ ಅವಧಿಯಲ್ಲಿ ಕ್ಲೌಡ್ ಮೂಲಸೌಕರ್ಯಕ್ಕಾಗಿ ಒಟ್ಟು ಯೋಜಿತ ಮೊತ್ತ 21 ಬಿಲಿಯನ್ ಡಾಲರ್ ನೀಡಲಿದೆ. ಈ ಬಂಡವಾಳ ನಿಯೋಜನೆಯು ಮುಂಬೈ ಮತ್ತು ಹೈದರಾಬಾದ್‌ನಲ್ಲಿ ಅಮೆಜಾನ್ ವೆಬ್ ಸೇವೆಗಳ ಡೇಟಾ ಸೆಂಟರ್ ಸಾಮರ್ಥ್ಯಗಳನ್ನು ವಿಸ್ತರಿಸುತ್ತದೆ ಎಂದು ಮಾಹಿತಿ ನೀಡಿದರು.

ಭಾರತವು ಜಾಗತಿಕವಾಗಿ ಕ್ಲೌಡ್ ಮತ್ತು ಎಐ ಹಬ್ ಆಗಿ ಬೆಳೆಯುತ್ತಿದೆ. ಇಲ್ಲಿ ನಮಗೆ ತುಂಬಾ ಬೇಡಿಕೆಯಿದ್ದು, ದೇಶದಲ್ಲಿ ನಾವು ಕ್ಲೌಡ್ ಮತ್ತು ಎಐ ಹೂಡಿಕೆ ಮಾಡುವುದನ್ನು ಮುಂದುವರಿಸುತ್ತಿದ್ದೇವೆ. ಈ ಹೂಡಿಕೆ ದೀರ್ಘಾವಧಿಯ ಉದ್ಯೋಗ ಮತ್ತು ಆರ್ಥಿಕ ಮಾಪನಗಳನ್ನು ಸಹ ವಿವರಿಸುತ್ತದೆ. ಕಂಪನಿಯು ತನ್ನ ಉದ್ಯೋಗ ಪರಿಸರ ವ್ಯವಸ್ಥೆಯನ್ನು 2030ರ ಅಂತ್ಯದ ವೇಳೆಗೆ ಸರಿಸುಮಾರು 3.8 ಮಿಲಿಯನ್ ಉದ್ಯೋಗ ಸೃಷ್ಟಿಯನ್ನು ಉದ್ದೇಶಿಸಿದೆ.

2030ರ ಸುಮಾರಿಗೆ ಸ್ಥಾಪಿಸಲಾದ ಹೆಚ್ಚುವರಿ ಗುರಿಗಳಲ್ಲಿ 80 ಬಿಲಿಯನ್ ಡಾಲರ್ ಇ-ಕಾಮರ್ಸ್ ರಫ್ತುಗಳನ್ನು ಸಕ್ರಿಯಗೊಳಿಸುವುದು, 15 ಮಿಲಿಯನ್ ಸಣ್ಣ ವ್ಯವಹಾರಗಳಿಗೆ ಎಐ ಪ್ರಯೋಜನ ವಿಸ್ತರಣೆ, 4 ಮಿಲಿಯನ್ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಎಐ ಶಿಕ್ಷಣವನ್ನು ಪರಿಚಯಿಸುವುದು ಸೇರಿವೆ ಎಂದು ತಿಳಿಸಲಾಗಿದೆ.



ಉತ್ತರ ಕರ್ನಾಟಕದ ಜೀವನದಿ ತುಂಗಭದ್ರಾ ಜಲಾಶಯಕ್ಕೆ ಹೊಸ ಕಳೆ: ಹೊಸ ಗೇಟಗಳ ಲೋಕಾರ್ಪಣೆಗೆ ಭರ್ಜರಿ ಸಿದ್ಧತೆ

ಕೊಪ್ಪಳ ಜೂ.24-

ಉತ್ತರ ಕರ್ನಾಟಕದ ಜೀವನದಿ ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟಗಳ ಲೋಕಾರ್ಪಣೆ ಸಮಾರಂಭಕ್ಕೆ ಕ್ಷಣಗಣನೆ ಆರಂಭವಾಗಿದೆ. ಜೂನ್ 25ರಂದು ಕಾರ್ಯಕ್ರಮ ನಿಗದಿಯಾಗಿದ್ದು, ಕೊಪ್ಪಳ ಜಿಲ್ಲೆಯ ಮುನಿರಾಬಾದ್ ಗ್ರಾಮದ ಪ್ರೌಢ ಶಾಲಾ ಆವರಣದಲ್ಲಿ ಬೃಹತ್ ವೇದಿಕೆಯು ಸಿದ್ಧವಾಗುತ್ತಿದೆ.

ಈ ಕಾರ್ಯಕ್ರಮಕ್ಕೆ ಕರ್ನಾಟಕ, ತೆಲಂಗಾಣ ಮತ್ತು ಆಂದ್ರಪ್ರದೇಶ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಸೇರುತ್ತಿರುವುದು ವಿಶೇಷತೆಯಾಗಿದೆ. ಜೊತೆಗೆ ಮೂರೂ ರಾಜ್ಯಗಳ ಸಚಿವರು, ಶಾಸಕರು, ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳು ಸಹ ಆಗಮಿಸುತ್ತಿದ್ದಾರೆ.

ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸುತ್ತಿರುವ ಮಹತ್ವದ ಈ ಕಾರ್ಯಕ್ರಮವು ಶಿಸ್ತು ಬದ್ದವಾಗಿ ನಡೆಯುವ ದಿಶೆಯಲ್ಲಿ ಸೂಕ್ತ ಭದ್ರತೆ ಮತ್ತು ಮುನ್ನೆಚ್ಚರಿಕೆ ಕ್ರಮಗಳು ವೇಗವಾಗಿ ನಡೆಯುತ್ತಿವೆ. ರಾಜ್ಯದ ಜಲ ಸಂಪನ್ಮೂಲ ಸಚಿವರು, ತುಂಗಭದ್ರಾ ಆಣೆಕಟ್ಟಿನ ಅಚ್ಚುಕಟ್ಟು ಪ್ರದೇಶದ ಸಂಸದರು ಹಾಗೂ ಶಾಸಕರು ಹಲವು ಸಭೆಗಳನ್ನು ನಡೆಸಿ ಕಾರ್ಯಕ್ರಮದ ಸಿದ್ದತೆಗಾಗಿ ಅಧಿಕಾರಿಗಳಿಗೆ ಮಾರ್ಗದರ್ಶನ ಮಾಡುತ್ತಿದ್ದಾರೆ. ಬಳ್ಳಾರಿ ವಲಯದ ಐಜಿಪಿ ಡಾ.ಹರ್ಷ ಪಿ ಎಸ್,

- ★ ತುಂಗೆಯ ಅಂಗಳದಲ್ಲಿ ಹಬ್ಬದ ಸಂಭ್ರಮ
- ★ ಟಿಬಿ ಡ್ಯಾಮ್, ಮುನಿರಾಬಾದನಲ್ಲಿ ಖಾಕಿ ಪಡೆಯಿಂದ ಸರ್ಪಗಾವಲು
- ★ ಕೊಪ್ಪಳ, ವಿಜಯನಗರ, ಬಳ್ಳಾರಿ, ರಾಯಚೂರು ಜಿಲ್ಲೆಗಳ ಅನ್ನದಾತರ ಮೊಗದಲ್ಲಿ ಹರ್ಷ



ಕೊಪ್ಪಳ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ.ರಾಮ್ ಎಲ್ ಅರಸಿದ್ದಿ ಜೊತೆಗೆ ವಿಜಯನಗರ ಹಾಗೂ ಬಳ್ಳಾರಿ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಒಗ್ಗೂಡಿ, ಅಧಿಕಾರಿಗಳೊಂದಿಗೆ ಈಗಾಗಲೇ ಹತ್ತಾರು ಸುತ್ತಿನ ಸಭೆಗಳನ್ನು ನಡೆಸಿ, ಹಲವಾರು ನಿರ್ದೇಶನಗಳನ್ನು ನೀಡಿ ಕಾರ್ಯಪ್ರವೃತ್ತರಾಗಿದ್ದಾರೆ.

ಐಜಿಪಿ ಹರ್ಷ ಅವರಿಂದ ಸಭೆ ಕಳೆದ 15 ದಿನಗಳಿಂದ ಮೇಲಿಂದ ಮೇಲೆ ಡ್ಯಾಮ್ ಪ್ರದೇಶಕ್ಕೆ ಭೇಟಿ ನೀಡುತ್ತಿರುವ ಬಳ್ಳಾರಿ ವಲಯದ ಐಜಿಪಿ ಡಾ.ಪಿ.ಎಸ್.ಹರ್ಷ ಅವರು ಜೂನ್ 23ರಂದು ಸಹ ಮುನಿರಾಬಾದ್ ಶಾಲಾ ಮೈದಾನದಲ್ಲಿ ಕೊಪ್ಪಳ, ವಿಜಯನಗರ, ಬಳ್ಳಾರಿ ಜಿಲ್ಲೆಗಳ ಎಸ್ಪಿ, ಡಿವೈಎಸ್ಪಿ, ಸಿಪಿಐ, ಪಿಎಸ್ಐ ಸೇರಿದಂತೆ ಖಾಕಿ ಪಡೆಯೊಂದಿಗೆ ಸಭೆ ನಡೆಸಿ ಭದ್ರತಾ ಕ್ರಮಗಳಿಗೆ ಸಂಬಂಧಿಸಿದಂತೆ ಕೆಲ ಪ್ರಮುಖ ನಿರ್ದೇಶನಗಳನ್ನು ನೀಡಿದರು.

ಸ್ವಾಗತ ಕಮಾನುಗಳು: ಕಾರ್ಯಕ್ರಮಕ್ಕೆ ಆಗಮಿಸಲಿರುವ ರಾಜ್ಯದ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ, ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು, ತೆಲಂಗಾಣ ಮುಖ್ಯಮಂತ್ರಿ ಎ ರೇವಂತ ರೆಡ್ಡಿ ಸೇರಿದಂತೆ, ಉಪ ಮುಖ್ಯಮಂತ್ರಿಗಳು, ಸಚಿವರು, ಸಂಸದರು, ಶಾಸಕರು ಮತ್ತು ಇನ್ನಿತರ ಗಣ್ಯರ ಭಾವಚಿತ್ರದ ಕಮಾನುಗಳು ಕಾರ್ಯಕ್ರಮದ ಸುತ್ತಲಿನ ಪ್ರದೇಶದಲ್ಲಿ ಹಾಗೂ ಕೊಪ್ಪಳ ಮತ್ತು ಹೊಸಪೇಟೆಯ ಪ್ರಮುಖ ರಸ್ತೆಗಳಲ್ಲಿ ಕಾಣುತ್ತಿವೆ.

ತುಂಗೆಯ ಅಂಗಳದಲ್ಲಿ ಸಿಂಗಾರ: ಸಿಎಂ ಕಾರ್ಯಕ್ರಮ ಹಿನ್ನೆಲೆಯಲ್ಲಿ ತುಂಗಭದ್ರಾ ಡ್ಯಾಮನ ಸುತ್ತಲು ಸುಗಮ ರಸ್ತೆ ಸಂಚಾರಕ್ಕಾಗಿ ಹಲವಾರು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ತುಂಗೆಯ ತಟದಲ್ಲಿರುವ ಹಸಿರು ಸಿರಿಯ ಗ್ರಾಮ ಮುನಿರಾಬಾದನಲ್ಲಿನ ಪ್ರಮುಖ ರಸ್ತೆಗಳನ್ನು ಅಗಲೀಕರಣಗೊಳಿಸಲಾಗಿದೆ. ಮುಖ್ಯ ರಸ್ತೆಯಲ್ಲಿನ ರಸ್ತೆ ವಿಭಜಕಗಳಿಗೆ ಸುಣ್ಣ-ಬಣ್ಣ ಬಳಿಯಲಾಗುತ್ತಿದೆ. ಮುನಿರಾಬಾದ್ ಸೇರಿದಂತೆ ತುಂಗೆಯ ಅಂಗಳದಲ್ಲಿ ಎಲ್ಲೆಡೆ ಹಬ್ಬದ ಸಂಭ್ರಮ ಕಾಣುತ್ತಿದೆ.

ರೈತರ ಮೊಗದಲ್ಲಿ ಸಂತಷ: ಕೊಪ್ಪಳ, ವಿಜಯನಗರ, ಬಳ್ಳಾರಿ ಹಾಗೂ ರಾಯಚೂರು ಜಿಲ್ಲೆಯ ಸಾವಿರಾರು ಎಕರೆ ಭೂಮಿಗೆ ನೀರುಣಿಸುವ ತುಂಗಭದ್ರಾ ಜಲಾಶಯಕ್ಕೆ ಹೊಸ ಗೇಟಗಳನ್ನು ಅಳವಡಿಸಿರುವುದು ಈ ಭಾಗದ ರೈತರ ಮೊಗದಲ್ಲಿ ಸಂತಷ ಮೂಡಿಸಿದೆ. ತುಂಗಭದ್ರೆಯು ಈ ವರ್ಷವೂ ತುಂಬಿಕೊಂಡು ಈ ಭಾಗದಲ್ಲಿ ಎಂದಿನಂತೆ ಎಲ್ಲೆಡೆ ಹಸಿರು ಕಾಣಲಿ ಎಂಬುದು ಈ ನೆಲದ ಜನರ ಆಶಯವಾಗಿದೆ.

ಪೋಲಿಯೋ ಲಸಿಕಾ ಕಾರ್ಯಕ್ರಮದ ಜಾಗೃತಿ ಜಾಥಾ



ಸಿರುಗುಪ್ಪ- ನಗರದಲ್ಲಿ ನಗರ ಸಭೆ ಆರೋಗ್ಯ ಇಲಾಖೆ ಮತ್ತು ಮಹಿಳಾ ಮತ್ತು ಶಿಶು ಅಭಿವೃದ್ಧಿ ಇಲಾಖೆಗಳ ಸಹಕಾರದೊಂದಿಗೆ ರಾಷ್ಟ್ರೀಯ ಪೋಲಿಯೋ ಲಸಿಕಾ ಕಾರ್ಯಕ್ರಮದ ಜಾಗೃತಿ ಜಾಥಾ ನಡೆಯಿತು.

ನಗರಸಭೆಯಿಂದ ಹೊರಟ ಜಾತಾವು ಜೀವಕ್ಕಾಗಿ ಎರಡು ಹನಿ ಪೋಲಿ ಹನಿ ಹಾಕಿಸಿ ಅಂಗವಿಕಲತೆ ತಪ್ಪಿಸಿ ಮುಂತಾದ ಘೋಷಣೆಗಳನ್ನು ಕೂಗುತ್ತಾ ಘನ ತ್ಯಾಜ್ಯ ವಿಲೇವಾರಿ ವಾಹನದಲ್ಲಿ ಪೋಲಿಯೋ ಆಡಿಯೋ ಜಿಂಗಲ್ಸ್ ಗಳನ್ನು ಹಾಕಿ ಅಂಬೇಡ್ಕರ್ ವೃತ್ತದಿಂದ ಮಹಾತ್ಮ ಗಾಂಧಿ ವೃತ್ತದ ವರೆಗೆ ಸಾಗಿತು .

ಮಹಾತ್ಮ ಗಾಂಧಿ ವೃತದಲ್ಲಿ ಮಾನವ ಸರಪಳಿ ನಿರ್ಮಿಸಿ ಡಾಕ್ಟರ್ ವಿದ್ಯಾಶ್ರೀ ಅವರು ಯಾವ ಒಂದು ಮಗು ಲಸಿಕೆ ಯಿಂದ ವಂಚಿತವಾಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ಮಾನ್ಯ ಪೌರಾಯುಕ್ತರು ಸಿರುಗುಪ್ಪ ನಗರಸಭೆ, ಆರ್ ಬಿ ಎಸ್ ಕೆ ವೈದ್ಯಾಧಿಕಾರಿ ಡಾ. ಮಲ್ಲಿಕಾರ್ಜುನ್ ರೆಡ್ಡಿ ತಾಲೂಕು ಆರೋಗ್ಯ ನಿರೀಕ್ಷಣಾಧಿಕಾರಿ ಭೀಮರಾಜ ರೆಡ್ಡಿ ಹಿರಿಯ ಆರೋಗ್ಯ ನಿರೀಕ್ಷಕರು ಶ್ರೀನಿವಾಸ್ ಜಿ ಹಾಗೂ ಕಿರಿಯ ಆರೋಗ್ಯ ನಿರೀಕ್ಷಕರು ಹಿಮಂತ್ ರಾಜ್ ಬಾಗ್ಲಿ ಹಾಗೂ ಕಂದಾಯ ನಿರೀಕ್ಷಕರು ವೆಂಕೋಬ, ಸಮುದಾಯ ಸಂಚಾಲಕರು , ಸ್ವಚ್ಛತಾ ಸಿಬ್ಬಂದಿಗಳು, ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಅಂಗನವಾಡಿ ಕಾರ್ಯಕರ್ತೆಯರು ಮತ್ತು ಆಶಾ ಕಾರ್ಯಕರ್ತೆಯರು ಜಾತಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಿದರು. *ಸಂಜೆ ಜ್ವಾಲೆ*

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ತುಂಗಭದ್ರಾ ಜಲಾಶಯದ ಹೊಸ ಸ್ಪಿಲ್ ವೇ ಗೇಟುಗಳ ಲೋಕಾರ್ಪಣೆ ಸಮಾರಂಭಕ್ಕೆ ಅಗತ್ಯ ಶಿಷ್ಟಾಚಾರ ಪಾಲನೆ: ಡಾ.ಸುರೇಶ ಬಿ ಇಟ್ನಾಳ

ಕೊಪ್ಪಳ ಜೂ.25-

ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಿದ 33 ಸ್ಪಿಲ್ ವೇ ಗೇಟುಗಳ ಲೋಕಾರ್ಪಣೆ ಸಮಾರಂಭಕ್ಕೆ ಕೊಪ್ಪಳ ಜಿಲ್ಲಾಡಳಿತ ಮತ್ತು ಜಿಲ್ಲಾ ಪೊಲೀಸ್ ಇಲಾಖೆ ಗಳಿಂದ ಎಲ್ಲಾ ರೀತಿಯ ಅಗತ್ಯ ಶಿಷ್ಟಾಚಾರಕ್ಕೆ ಕ್ರಮ ವಹಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ.ಸು ರೇಶ ಇಟ್ನಾಳ ಅವರು ಹೇಳಿದರು.

ಜೂನ್ 24ರಂದು ಜಿಲ್ಲಾಧಿ ಕಾರಿಗಳ ಕಚೇರಿ ಸಭಾಂಗಣದಲ್ಲಿ ಪತ್ರಕರ್ತರೊಂದಿಗೆ ಸಭೆ ನಡೆಸಿ ಅವರು ಮಾಹಿತಿ ನೀಡಿದರು.

ಕೇಂದ್ರ ಜಲಶಕ್ತಿ ಸಚಿವರು, ಕರ್ನಾಟಕ, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ಮುಖ್ಯ ಮಂತ್ರಿ ಗಳು, ಸಚಿವರು, ಸಂಸದರು ಮತ್ತು ಶಾಸಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ಜೂನ್ 25ರಂದು ಬೆಳಗ್ಗೆ ಐಆರ್‌ಬಿನಲ್ಲಿ ಹೆಲಿಪ್ಯಾಡಗೆ ಆಗಮಿಸುವ ಮುಖ್ಯಮಂತ್ರಿಗಳು ಹಾಗೂ ಗಣ್ಯರು ಮೊದಲಿಗೆ ಜಲಾಶಯದ ಕ್ರಸ್ಟ್‌ಗೇಟು ಗಳ ಲೋಕಾರ್ಪಣೆ ಸಮಾ ರಂಭ ದಲ್ಲಿ ಭಾಗಿಯಾಗುವರು. ಬಳಿಕ ಮುನಿರಾಬಾದ್ ಗ್ರಾಮದಲ್ಲಿನ ಸರ್ಕಾರಿ ಹೈಸ್ಕೂಲ್ ಗ್ರೌಂಡ್‌ನಲ್ಲಿ ಸಾರ್ವಜನಿಕ ಸಮಾರಂಭ



ನಡೆಯಲಿದೆ. ಕಾರ್ಯಕ್ರಮದಲ್ಲಿ ಅಂದಾಜು 15 ಸಾವಿರ ಜನರು ಪಾಲ್ಗೊಳ್ಳಲು ಏರ್ಪಾಡು ಮಾಡ ಲಾಗಿದೆ ಎಂದು ಅವರು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿ ಕಾರಿಗಳಾದ ಡಾ.ರಾಮ್ ಎಲ್ ಅರಸಿದ್ದಿ ಅವರು ಮಾತನಾಡಿ, ಕಾರ್ಯಕ್ರಮವು ಶಾಂತಿಯುತವಾಗಿ ನಡೆಯುವ ದಿಶೆಯಲ್ಲಿ ಭದ್ರತೆಗಾಗಿ ಅಗತ್ಯ ಸಂಖ್ಯೆಯಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಆರು ಜನ ಎಸ್‌ಪಿ, 25 ಜನ ಡಿವೈಎಸ್‌ಪಿ, 25 ಕ್ಕೂ ಹೆಚ್ಚು ಜನ ಸಿಪಿಐ ಮತ್ತು ಪಿಎಸ್‌ಐ ಹಾಗೂ ನೂರಾರು ಸಂಖ್ಯೆ ಯಲ್ಲಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಕೆಎಸ್‌ಆರ್‌ಪಿ ಸೇರಿದಂತೆ ವಿವಿಧ ಪೊಲೀಸ್ ತುಕ ಡಿಗಳ ಸೇವೆಯನ್ನು ಬಳಸಿಕೊಳ್ಳ ಲಾಗುತ್ತಿದೆ. 150 ಬಸ್ಸು ಗಳಿಗೆ ಹಾಗೂ 250 ಕ್ಕೂ ಹೆಚ್ಚು ಬೇರೆ ಬೇರೆ ವಾಹನಗಳಿಗೆ ಬೇರೆ ಬೇರೆ ಕಡೆಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಿದ್ದು, ಸಾರ್ವಜನಿಕರು ನಿಗದಿತ ಸ್ಥಳದಲ್ಲಿ ವಾಹನ ನಿಲ್ಲಿಸಿ ಸಹಕರಿಸಬೇಕು. ಸಿಎಂ ಕಾರ್ಯಕ್ರಮದ ಭದ್ರತಾ ಹಿನ್ನೆಲೆಯಲ್ಲಿ ಪಂಪಾವನದ ಮುಂದಿ ನ ರಸ್ತೆ ಹಾಗೂ ಸುತ್ತಲಿನ ಪ್ರದೇ ಶದಲ್ಲಿ ಯಾರಿಗೂ ಸಹ ಪ್ರವೇಶಕ್ಕೆ ಅವಕಾಶವಿರುವುದಿಲ್ಲ. ಹುಲಿಗಿ ಕ್ರಾಸ್ ನಿಂದ ಹೊಸಪೇಟೆಯತ್ತ ಹೋಗುವ ಮತ್ತು ಬರುವ ವಾಹನ ಗಳ ಸಂಚಾರಕ್ಕೆ ಸಹ ಸೂಕ್ತ ಮಾರ್ಗ ಸೂಚಿ ನಿಗದಿಪಡಿಸಲಾಗಿದೆ. ಸಿಎಂ ಕಾರ್ಯಕ್ರಮ ಹಿನ್ನೆಲೆಯಲ್ಲಿ ಭದ್ರತಾ ದೃಷ್ಟಿಯಿಂದ ಸುಮಾರು 4 ಗಂಟೆಗಳ ಸಮಯದವರೆಗೆ ಜನತೆ ಸಹಕಾರ ನೀಡಬೇಕು ಎಂದು ಮನವಿ ಮಾಡಿ ದರು. ಈ ವೇಳೆ ಅಪರ ಜಿಲ್ಲಾಧಿಕಾರಿ ಗಳಾದ ಸಿದ್ರಮೇಶ್ವರ ಇದ್ದರು.

ಕೊಪ್ಪಳ:ವಿಶ್ವ ರಕ್ತದಾನಿಗಳ ದಿನಾಚರಣೆ

ಕೊಪ್ಪಳ ಜೂ.25-

ಭಾರತೀಯ ರೆಡ್ ಕ್ರಾಸ್ ಸೊಸೈಟಿ, ಕರ್ನಾಟಕ ರಾಜ್ಯ ಶಾಖೆ ಹಾಗೂ ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ ಯುವ ರೆಡ್ ಕ್ರಾಸ್ ಘಟಕದ ಸಹಯೋಗದಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆ2026 ಕಾರ್ಯಕ್ರಮವನ್ನು ಬೆಂಗಳೂರು ನಗರದ ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ ಜ್ಞಾನ ಜ್ಯೋತಿ ಸೆಮಿನಾರ್ ಹಾಲ್‌ನಲ್ಲಿ ಜೂನ್ 23 ರಂದು ಜರುಗಿತು.

''ಒಂದು ಹನಿ ಮಾನವೀಯತೆ ರಕ್ತದಾನ ಮಾಡಿ, ಜೀವ ಉಳಿಸಿ'' ಎಂಬ ಘೋಷವಾಕ್ಯದಡಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮವನ್ನು ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ನಿರ್ದೇಶಕರಾದ ರಜನೀಶ್ ಶರ್ಮಾ ಉದ್ಘಾಟಿಸಿ ಮಾತನಾಡಿ, ರಕ್ತದಾನವು ಅತ್ಯುನ್ನತ ಮಾನವೀಯ ಸೇವೆಯಾಗಿದ್ದು, ಸ್ವಯಂಪ್ರೇರಿತ ರಕ್ತದಾನಿಗಳ ಸೇವೆ ಸಮಾಜಕ್ಕೆ ಅಪಾರ ಕೊಡುಗೆಯಾಗಿದೆ ಎಂದು ತಿಳಿಸಿದರು. ನಿಯಮಿತವಾಗಿ ರಕ್ತದಾನ ಮಾಡುವ ಮೂಲಕ ಅನೇಕ ಜೀವಗಳನ್ನು ಉಳಿಸುತ್ತಿರುವ ದಾನಿಗಳನ್ನು ಅಭಿನಂದಿಸಿ, ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನ ಚಳುವಳಿಗೆ ಸೇರ್ಪಡೆಯಾಗಬೇಕೆಂದು ಕರೆ ನೀಡಿದರು.

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ರಮೇಶ್ ಬಿ ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ, ವಿದ್ಯಾರ್ಥಿಗಳಲ್ಲಿ ಸಾಮಾಜಿಕ



ಜವಾಬ್ದಾರಿ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಶಿಕ್ಷಣ ಸಂಸ್ಥೆಗಳ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು. ರಕ್ತದಾನದ ಮಹತ್ವವನ್ನು ಯುವಜನರಲ್ಲಿ ಅರಿವು ಮೂಡಿಸಿ, ಪ್ರತಿಯೊಬ್ಬರೂ ಸ್ವಯಂಪ್ರೇರಿತ ರಕ್ತದಾನಿಗಳಾಗುವಂತೆ ಪ್ರೇರೇಪಿಸಬೇಕೆಂದು ಹೇಳಿದರು.

ಕರ್ನಾಟಕ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಆರ್. ಪ್ರಭುಶಂಕರ್ ಮಾತನಾಡಿ, ರಕ್ತದಾನಿಗಳು ಸಮಾಜದಲ್ಲಿ ನಿಜವಾದ ನಾಯಕರಾಗಿದ್ದು, ಯಾವುದೇ ಪ್ರತಿಫಲದ ನಿರೀಕ್ಷೆಯಿಲ್ಲದೆ ಜೀವ ರಕ್ಷಣೆಗಾಗಿ ನೀಡುತ್ತಿರುವ ಸೇವೆ ಶ್ಲಾಘನೀಯವಾಗಿದೆ ಎಂದು ಹೇಳಿದರು. ಆರೋಗ್ಯ ಕ್ಷೇತ್ರಕ್ಕೆ ರಕ್ತದಾನಿಗಳ ಕೊಡುಗೆ ಅಮೂಲ್ಯವಾಗಿದ್ದು, ಸಮಾಜಕ್ಕೆ ಮಾದರಿಯಾಗಿದ್ದಾರೆ ಎಂದು ಪ್ರಶಂಸಿಸಿದರು.

ಎಇಜಿ ಕೇಂದ್ರದ ಕರ್ನಲ್ ಪ್ರೊಸೆಂಜಿತ್ ದೇಬ್ ಮಾತನಾಡಿ, ತುರ್ತು ಚಿಕಿತ್ಸೆ ಗಳು, ಶಸ್ತ್ರಚಿಕಿತ್ಸೆ ಗಳು ಹಾಗೂ ಅಪಘಾತ ಸಂದರ್ಭಗಳಲ್ಲಿ ರಕ್ತದ ಅಗತ್ಯತೆ ಹೆಚ್ಚಾಗಿರುವುದರಿಂದ ಪ್ರತಿಯೊಬ್ಬ ಆರೋಗ್ಯವಂತ ನಾಗರಿಕರೂ ನಿಯಮಿತವಾಗಿ ರಕ್ತದಾನ ಮಾಡಬೇಕು ಎಂದು ಕರೆ ನೀಡಿದರು. ಸುರಕ್ಷಿತ ಹಾಗೂ ಸಮರ್ಪಕ ರಕ್ತ ಸಂಗ್ರಹವು ಆರೋಗ್ಯ ವ್ಯವಸ್ಥೆಯ ಬಲವರ್ಧನೆಗೆ ಅಗತ್ಯವೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಭಾರತೀಯ ರೆಡ್ ಕ್ರಾಸ್ ಸೊಸೈಟಿ ಕರ್ನಾಟಕ ರಾಜ್ಯ ಶಾಖೆಯ ಸಭಾಪತಿ ಬಸ್ರೂರು ರಾಜೀವ್ ಶೆಟ್ಟಿ ಹಾಗೂ ಉಪಸಭಾಪತಿಗಳಾದ ಡಾ. ಶ್ರೀನಿವಾಸ್ ಎಸ್. ಹ್ಯಾಟಿ ಅವರು ಗೌರವ ಅತಿಥಿಗಳಾಗಿ ಭಾಗವಹಿಸಿದ್ದರು.

ರಕ್ತದಾನಿಗಳಿಗೆ ಸನ್ಮಾನ: ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ 25 ಕ್ಕೂ ಹೆಚ್ಚು ಬಾರಿ ರಕ್ತದಾನ ಮಾಡಿದ 12 ಜನ ಸ್ವಯಂಪ್ರೇರಿತ ರಕ್ತದಾನಿಗಳನ್ನು ಸನ್ಮಾನಿಸಲಾಯಿತು. ಎ.ಎಂ. ಸುರೇಶ್ (86 ಬಾರಿ), ರಾಘವೇಂದ್ರ ಜಿ.ಎನ್. (78 ಬಾರಿ), ಎಂ. ಕಾರ್ತಿಕ್ (70ಕ್ಕೂ ಹೆಚ್ಚು ಬಾರಿ), ಡಾ. ಮಹೇಶ್ ಯಾಲೆಲಿಂಗಪ್ಪ (42 ಬಾರಿ), ನಾಗೇಶ್ ಬಾಳ್ನಾಡ್ (39 ಬಾರಿ), ಟಿ.ಆರ್. ನಾಗೇಶ್ (36 ಬಾರಿ), ರಾಮ್ ಕಿರಣ್ ಕೆ. (30 ಬಾರಿ), ನಾಗರಾಜನಾಯಕ ಡೊಳ್ಳಿನ್ (29 ಬಾರಿ), ರಾಘವೇಂದ್ರ ಶೆಟ್ಟಿ (27 ಬಾರಿ), ಅನಿಲ್ ರಾಜ್ ಎಚ್.ಸಿ. (27 ಬಾರಿ), ಮಹಾಂತೇಶ್ ಹೊಳೆಮ್ಮನವರ (26 ಬಾರಿ) ಹಾಗೂ ಹೇಮಂತ್ ಕಿಶೋರ್ ಮೋದಿ (26 ಬಾರಿ) ಅವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಸನ್ಮಾನಿತ ರಕ್ತದಾನಿಗಳ ಪರವಾಗಿ ಕೊಪ್ಪಳದ ನಾಗರಾಜನಾಯಕ ಡಿ.ಡೊಳ್ಳಿನ ಮಾತನಾಡಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳು, ಸ್ವಯಂಸೇವಕರು ಹಾಗೂ ಸಾರ್ವಜನಿಕರು ರಕ್ತದಾನದ ಮಹತ್ವದ ಬಗ್ಗೆ ಅರಿವು ಪಡೆದು, ಭವಿಷ್ಯದಲ್ಲಿ ನಿಯಮಿತ ವಾಗಿ ರಕ್ತದಾನ ಮಾಡುವ ಸಂಕಲ್ಪ ಕೈಗೊಂ ಡರು. ಭಾರತೀಯ ರೆಡ್ ಕ್ರಾಸ್ ಸೊಸೈಟಿ, ಕರ್ನಾಟಕ ರಾಜ್ಯ ಶಾಖೆಯ ಉಪಸಭಾ ಪತಿಗಳಾದ ಡಾ. ಶ್ರೀನಿವಾಸ್ ಎಸ್. ಹ್ಯಾಟಿ ಅವರು ವಂದಿಸಿದರು.

ಸರ್ಕಾರದ ಸೌಲಭ್ಯಗಳು ಕಟ್ಟಕಡೆಯ ಬಡವರಿಗೂ ತಲುಪಿಸುವುದು ನಮ್ಮ ಗುರಿ: ರಾಮಪ್ಪ ಎಂ.

ಕಲಬುರಗಿ:,ಜೂ.25-

ಸಮಾಜದ ಕಟ್ಟಕಡೆಯ ಬಡವ ರಿ ಗೂ ಸರ್ಕಾರದ ಸೌಲಭ್ಯಗಳು ತಲುಪುವಂತೆ ಪ್ರಾಮಾಣಿಕವಾಗಿ ಕೆಲಸ ಮಾಡಲಾಗುತ್ತಿದೆ ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ರಾಮಪ್ಪ ಎಂ. ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಸಂಯುಕ್ತಾಶ್ರಯದಲ್ಲಿ ನಡೆದ ನಿಗಮದ ವಿವಿಧ ಯೋಜ ನೆಗಳ ಪ್ರಗತಿ ಪರಿಶೀಲನಾ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ನಿಗಮದ ಬಾಕಿ ಇರುವ ಎಲ್ಲಾ ಅರ್ಜಿಗಳನ್ನು 30 ದಿನಗಳೊಳಗೆ ವಿಲೇವಾರಿ ಮಾಡುವಂತೆ ಅಧಿಕಾರಿ ಗಳಿಗೆ ಸೂಚನೆ ನೀಡಲಾಗಿದೆ. ಜೊತೆಗೆ ನಕಲಿ ಜಾತಿ ಪ್ರಮಾಣ ಪತ್ರಗಳ ಮೂಲಕ ಸೌಲಭ್ಯ ಪಡೆಯುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಈ ಬಾರಿ ನಿಗಮಕ್ಕೆ 75 ಕೋಟಿ ರೂ. ಬಜೆಟ್ ನಿಗದಿಯಾಗಿದ್ದು, ವಿಕಾಸ ಯೋಜನೆ (ವಿಡಿಪಿ) ಸೇರಿ ದಂತೆ ಒಟ್ಟು ಅನುದಾನ ಸುಮಾರು 100 ಕೋಟಿ ರೂ. ತಲುಪುವ ನಿರೀಕ್ಷೆಯಿದೆ ಎಂದು ಹೇಳಿದರು.



13 ಗ್ಯಾರಂಟಿಗಳಿಂದ ಸಮುದಾಯಕ್ಕೆ ಲಾಭ :

ನಿಗಮದ 8 ಗ್ಯಾರಂಟಿ ಯೋಜನೆಗಳು ಹಾಗೂ ಸರ್ಕಾರದ 5 ಪಂಚ ಗ್ಯಾರಂಟಿ ಯೋಜನೆಗಳು ಸೇರಿ ಒಟ್ಟು 13 ಸೌಲಭ್ಯಗಳು ಸಮುದಾಯಕ್ಕೆ ದೊರೆಯುತ್ತಿವೆ. ನಿಗಮವು 10 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿದ್ದು, ಹಲವು ಯೋಜನೆಗಳು ಸಮುದಾಯದ ಅಭಿವೃದ್ಧಿಗೆ ಪೂರಕವಾಗಿವೆ ಎಂದು ಹೇಳಿದರು.

ಉತ್ತರ ಕರ್ನಾಟಕದ ಭೋವಿ ಹಾಗೂ ವಡ್ಡರ ಸಮುದಾಯಗಳು ದಕ್ಷಿಣ ಕರ್ನಾಟಕಕ್ಕೆ ಹೋಲಿಸಿದರೆ ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಹಿಂದುಳಿದಿರುವುದನ್ನು ಗಮನಿಸಿ, ಈ ಭಾಗಕ್ಕೆ ಹೆಚ್ಚಿನ ಅನುದಾನ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ತಾಲೂಕು ಮಟ್ಟದಲ್ಲಿ ಫಲಾನು ಭವಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ವಿಳಂಬವಾಗುತ್ತಿ ರುವುದಕ್ಕೆ ಅಸಮಾಧಾನ ವ್ಯಕ್ತಪಡಿ ಸಿದ ಅವರು, 30 ದಿನಗಳೊಳಗೆ ಶಾಸಕರ ಆಯ್ಕೆ ಪಟ್ಟಿಯನ್ನು ನಿಗಮದ ಮುಖ್ಯ ಕಚೇರಿಗೆ ಸಲ್ಲಿಸಬೇಕು ಹಾಗೂ ಬಾಕಿ ಅರ್ಜಿಗಳ ಸಂಖ್ಯೆ ಯನ್ನು ಶೂನ್ಯಕ್ಕೆ ತರಲು ಅಧಿಕಾರಿ ಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಶಿಕ್ಷಣ ಮತ್ತು ಸಬಲೀಕರಣಕ್ಕೆ ಒತ್ತು : ಬಡತನ ನಿವಾರಣೆಗೆ ಶಿಕ್ಷಣವೇ ಪ್ರಮುಖ ಮಾರ್ಗವಾಗಿದೆ. ಶಾಲೆ ಬಿಟ್ಟ ಮಕ್ಕಳನ್ನು ಗುರು ತಿಸಿ ಪುನಃ ಶಾಲೆಗೆ ಸೇರಿಸುವಂತೆ ಶಿಕ್ಷಣ ಇಲಾಖೆಗೆ ಸೂಚಿಸಲಾಗಿದೆ. ಹಾಸ್ಟೆಲ್ ಸೌಲಭ್ಯಗಳ ವಿಸ್ತರಣೆ, ಮಹಿಳಾ ಸಂಘಗಳ ಸಬಲೀಕರಣ ಹಾಗೂ ಅಲೆಮಾರಿ ಸಮುದಾಯ ಗಳ ಗುರುತಿಸುವ ಕಾರ್ಯಕ್ಕೂ ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ನಕಲಿ ಜಾತಿ ಪ್ರಮಾಣಪತ್ರಕ್ಕೆ ಕಡಿವಾಣ :

ನಕಲಿ ಜಾತಿ ಪ್ರಮಾಣಪತ್ರಗಳ ಮೂಲಕ ಅನರ್ಹರು ಸೌಲಭ್ಯ ಪಡೆಯುತ್ತಿರುವ ಪ್ರಕರಣಗಳನ್ನು ತಡೆಯಲು ಜಿಲ್ಲಾಧಿಕಾರಿಗಳು ಮತ್ತು ತಹಶೀಲ್ದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಇನ್ನು ಮುಂದೆ ಜಾತಿ ಪ್ರಮಾಣಪತ್ರ ನೀಡುವ ಮೊದಲು ಶಾಲಾ ದಾಖಲಾತಿಗಳ ಸಮಗ್ರ ಪರಿಶೀಲನೆ ಕಡ್ಡಾಯಗೊಳಿಸಲಾಗುವುದು ಎಂದು ರಾಮಪ್ಪ ಎಂ. ತಿಳಿಸಿದರು.

ಸಭೆಯಲ್ಲಿ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಪ್ರಧಾನ ವ್ಯವಸ್ಥಾಪಕ ಶಿವಸ್ವಾಮಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಜಗದೇವಪ್ಪ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ನಿಗಮದ ವ್ಯವಸ್ಥಾಪಕ ಮರಲಿಂಗ್ ಹೊನ್ನೆಗುಂಟಿಕರ್ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಸಮಾಜ ಮುಖಂಡರು ಉಪಸ್ಥಿತರಿದ್ದರು.

ಬಳ್ಳಾರಿಯ ಕೊಳಗಲ್ ಗ್ರಾಮದಲ್ಲಿ ಕಾರ ಹುಣ್ಣಿಮೆ ಆಚರಣೆಗೆ ನಿಷೇಧ:

ಬಳ್ಳಾರಿ,ಜೂ.24-

ತಾಲೂಕಿನ ಕೊಳಗಲ್ ಗ್ರಾಮ ದಲ್ಲಿ ಕಾನೂನು ಸುವ್ಯವಸ್ಥೆ ಹಾಗೂ ಶಾಂತಿ ಕಾಪಾಡುವ ಹಿತದೃಷ್ಟಿ ಯಿಂದ ಜೂನ್ 29 ಮತ್ತು 30 ರಂದು ನಡೆಯಬೇಕಿದ್ದ ಕಾರ ಹುಣ್ಣಿಮೆ' ಹಬ್ಬದ ಆಚರಣೆಯನ್ನು ನಿಷೇಧಿಸಿ ಬಳ್ಳಾರಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಾಗೇಂದ್ರ ಪ್ರಸಾದ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

ಜಿಲ್ಲಾ ಪೊಲೀಸ್ ಅಧೀಕ್ಷಕರು ಸಲ್ಲಿಸಿದ್ದ ವರದಿಯ ಪ್ರಕಾರ, ಕೊಳಗಲ್ಲು ಗ್ರಾಮದಲ್ಲಿ ಇತ್ತೀಚಿನ ದಿನಗಳಲ್ಲಿ ಗಲಭೆಗಳು ಹೆಚ್ಚಾಗು ತ್ತಿವೆ. ಗ್ರಾಮಸ್ಥರಲ್ಲಿ ಜಾತಿ-ಜಾತಿಗಳ ಮಧ್ಯೆ ವೈಷಮ್ಯತೆ ಹೆಚ್ಚಾಗುತ್ತಿದ್ದು, ಪೊಲೀಸ್ ಠಾಣೆಯಲ್ಲಿ ಪರ-ವಿರೋಧ ಪ್ರಕರಣಗಳು ದಾಖಲಾಗು ತ್ತಿವೆ. ಇಂತಹ ಸೂಕ್ಷ್ಮ ಪರಿಸ್ಥಿತಿ ಯಲ್ಲಿ ಕಾರ ಹುಣ್ಣಿಮೆ ಹಬ್ಬವನ್ನು ಆಚರಿಸಲು ಅವಕಾಶ ನೀಡಿದರೆ ಕಾನೂನು ಸುವ್ಯವಸ್ಥೆಗೆ ಧಕ್ಕೆ ಉಂಟಾಗುವ ಸಾಧ್ಯತೆ ಇದೆ. ಸಾರ್ವಜನಿಕರ ಆಸ್ತಿಪಾಸ್ತಿ ಹಾನಿ ಹಾಗೂ ಜನರ ಮಾನ-ಪ್ರಾಣಕ್ಕೆ ತೊಂದರೆಯಾಗುವ ಸಂಭವ ಹೆಚ್ಚಿರುವುದರಿಂದ ಈ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ.

ಕರ್ನಾಟಕ ಪೊಲೀಸ್ ಕಾಯ್ದೆ 1963 ರ ಕಲಂ 35 ರ ಅಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಜೂನ್ 29 ಮತ್ತು ಜೂನ್ 30 ರಂದು ಹಬ್ಬದ ಆಚರಣೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

ಕಲಬುರಗಿಯಲ್ಲಿ ಜೂ.28ರಿಂದ ಪಲ್ಸ್ ಪೋಲಿಯೋ ಅಭಿಯಾನ : ರಾಯಪ್ಪ ಹುಣಸಗಿ



ಕಲಬುರಗಿ,ಜೂ.25-

ಜಿಲ್ಲಾದ್ಯಂತ ಜೂ.28ರಿಂದ ಜುಲೈ 1ರವರೆಗೆ ನಡೆಯಲಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನದ ಅಂಗವಾಗಿ 0 ರಿಂದ 5 ವರ್ಷದೊಳಗಿನ 3,51,716 ಮಕ್ಕಳಿಗೆ ಪೋಲಿಯೋ ಲಸಿಕೆ ನೀಡುವ ಗುರಿ ಹೊಂದಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ತಿಳಿಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಟಾಸ್ಕ್ ಪೋರ್ಸ್-2 ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಭಿಯಾನದ ಮೊದಲ ದಿನ ಜಿಲ್ಲೆಯಾದ್ಯಂತ ನಿಗದಿತ ಲಸಿಕಾ ಕೇಂದ್ರಗಳಲ್ಲಿ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಾಗುವುದು ಎಂದು ಹೇಳಿದರು.

ಅಂಗನವಾಡಿ ಕೇಂದ್ರಗಳು, ಸಮುದಾಯ ಭವನಗಳು, ಬಸ್ ನಿಲ್ದಾಣಗಳು ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ಲಸಿಕಾ ಬೂತ್‌ಗಳನ್ನು ಸ್ಥಾಪಿಸಲಾಗಿದ್ದು, ಬಸ್ ನಿಲ್ದಾಣ, ರೈಲು ನಿಲ್ದಾಣ ಹಾಗೂ ಹೆದ್ದಾರಿ ಚೆಕ್‌ಪೋಸ್ಟ್‌ಗಳಂತಹ ಹೈರಿಸ್ಕ್ ಪ್ರದೇಶಗಳಲ್ಲಿ ವಿಶೇಷ ನಿಗಾ ವಹಿಸಲಾಗುವುದು ಎಂದು ತಿಳಿಸಿದರು.

ಬೂತ್ ದಿನದಂದು ಲಸಿಕೆ ಪಡೆಯದ ಮಕ್ಕಳಿಗೆ ಮುಂದಿನ ಮೂರು ದಿನಗಳ ಕಾಲ ಆರೋಗ್ಯ ಕಾರ್ಯಕರ್ತರು ಹಾಗೂ ಸ್ವಯಂಸೇವಕರು ಮನೆ-ಮನೆಗೆ ಭೇಟಿ ನೀಡಿ ಲಸಿಕೆ ನೀಡಲಿದ್ದಾರೆ ಎಂದು ಹೇಳಿದರು.

ಪೋಲಿಯೋ ಕುರಿತು ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಲು ವಿವಿಧ ಇಲಾಖೆಗಳ ವಾಟ್ಸಾಪ್ ಗುಂಪುಗಳ ಮೂಲಕ ಸಂದೇಶಗಳನ್ನು ಪ್ರಸಾರ ಮಾಡುವುದರ ಜೊತೆಗೆ ಶಾಲೆಗಳಲ್ಲಿ ಪ್ರಭಾತ ಫೇರಿ ಹಾಗೂ ಜಾಗೃತಿ ರ್‍ಯಾಲಿಗಳನ್ನು ಆಯೋಜಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸರ್ವಲೆನ್ಸ್ ಅಧಿಕಾರಿ ಡಾ. ಅನಿಲ್ ಕುಮಾರ್ ತಾಳಿಕೋಟಿ ಮಾತನಾಡಿ, ವಿಶ್ವದ ಕೆಲ ರಾಷ್ಟ್ರಗಳಲ್ಲಿ ಇನ್ನೂ ವೈಲ್ಡ್ ಪೋಲಿಯೋ ವೈರಸ್ ಪ್ರಕರಣಗಳು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಭಾರತ ಸರ್ಕಾರದ ನಿರ್ದೇಶನದಂತೆ ಪೋಲಿಯೋ ಮುಕ್ತ ಭಾರತ - ಪೋಲಿಯೋ ಮುಕ್ತ ಕರ್ನಾಟಕ ಘೋಷಣೆಯಡಿ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಒಟ್ಟು 1,519 ಲಸಿಕಾ ಕೇಂದ್ರಗಳು, 1,453 ಮನೆ ಭೇಟಿ ತಂಡಗಳು, 132 ಟ್ರಾನ್ಸಿಟ್ ತಂಡಗಳು ಹಾಗೂ 31 ಸಂಚಾರಿ ತಂಡಗಳು ಕಾರ್ಯನಿರ್ವಹಿಸಲಿದ್ದು, ಒಟ್ಟು 1,682 ತಂಡಗಳು, 333 ಮೇಲ್ವಿಚಾರಕರು ಹಾಗೂ 3,364 ಲಸಿಕಾ ಸಿಬ್ಬಂದಿ ಅಭಿಯಾನದಲ್ಲಿ ಪಾಲ್ಗೊಳ್ಳಲಿದ್ದಾರೆ.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹೇಶ್ ಮೇಘಣ್ಣನವರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶರಣಬಸಪ್ಪ ಕ್ಯಾತನಾಳ, ಆರ್‌ಸಿಎಚ್ ಅಧಿಕಾರಿ ಡಾ.ಸಿದ್ರಾಮ ಪಾಟೀಲ್, ಜಿಲ್ಲಾ ಸರ್ವೇಕ್ಷಣ ಅನುಷ್ಠಾನ ಅಧಿಕಾರಿ ಡಾ.ರಾಕೇಶ್ ಕಾಂಬಳೆ, ತಾಲೂಕು ಆರೋಗ್ಯ ಅಧಿಕಾರಿ ಡಾ.ಮಾರುತಿ ರಾವ್ ಕಾಂಬಳೆ ಸೇರಿದಂತೆ ಹಲವು ಆರೋಗ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ವಾಲ್ಮೀಕಿ ನಾಯಕ ಸಮಾಜಕ್ಕೆ ನಾಲ್ಕು ಸಚಿವ ಸ್ಥಾನ ನೀಡಲು ಆಗ್ರಹ

ನಾಯಕ ಸಮುದಾಯಕ್ಕೆ ನೀಡಬೇಕು ಎಂದು ಒತ್ತಾಯಿಸಿದರು.

ಅದರಲ್ಲೂ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿರುವ ಅವರಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಸಚಿವ ಸ್ಥಾನ ನೀಡುವ ಮೂಲಕ ರಾಯಚೂರು ಜಿಲ್ಲೆಗೆ ಸಚಿವ ಸ್ಥಾನ ಕಲ್ಪಿಸಬೇಕು ಎಂದು ಆಗ್ರಹಿಸಿದರು. ಉಳಿದ ಮೂರು ಸಚಿವ ಸ್ಥಾನಗಳನ್ನು ಸಹ ವಾಲ್ಮೀಕಿ ನಾಯಕ ಸಮುದಾಯದ ಅರ್ಹ ಶಾಸಕರಿಗೆ ನೀಡುವ ಮೂಲಕ ಸಮುದಾಯಕ್ಕೆ ನ್ಯಾಯ ಒದಗಿಸಬೇಕು ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ರಾಮು ನಾಯಕ, ರಮೇಶ್ ನಾಯಕ, ಜಲ್ಲಿ ರಾಮಪ್ಪ, ರಾಮಕೃಷ್ಣ ನಾಯಕ, ಈರಣ್ಣ ನಾಯಕ, ಹನುಮಂತ ನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮದ ಸದುಪಯೋಗ ಪಡಿಸಿಕೊಳ್ಳಿ

ಸಿರುಗುಪ್ಪ-ತಾಲೂಕಿನಲ್ಲಿ ಜೂನ್ 28ರಂದು ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮ ನಡೆಯಲಿದ್ದು ಸುಮಾರು 40ಸಾವಿರ ಮಕ್ಕಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದೆ ಎಂದು ತಾಲೂಕು ಆರೋಗ್ಯ ಅಧಿಕಾರಿ ಡಾ. ದಮ್ಮೂರು ಬಸವರಾಜ ಹೇಳಿದರು



ನಗರದ ತಾಲೂಕು ಕಚೇರಿ ಯ ಸಭಾಂಗಣದಲ್ಲಿ ನಡೆದ ಪಲ್ಸ್ ಪೋಲಿಯೊ ಕಾರ್ಯಕ್ರಮದ ಸಭೆಯಲ್ಲಿ ಮಾತನಾಡಿದ ಅವರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ತಾಲೂಕಿನ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸಾರ್ವಜನಿಕ ಆಸ್ಪತ್ರೆಗಳು ಸಮುದಾಯ ಆರೋಗ್ಯ ಕೇಂದ್ರಗಳು ಆಯುಷ್ಮಾನ್ ಆರೋಗ್ಯ ಮಂದಿರಗಳು ಅಂಗನವಾಡಿ ಕೇಂದ್ರಗಳು ಶಾಲೆಗಳು ಬಸ್ ನಿಲ್ದಾಣಗಳಲ್ಲಿ ಪೋಲಿಯೊ ಬೂತ್ಗಳನ್ನು ತೆರೆಯಲಾಗುವುದು ಆದ್ದರಿಂದ ಪೋಷಕರು ಸಮೀಪದ ಕೇಂದ್ರಗಳಲ್ಲಿ ಮಕ್ಕಳಿಗೆ ಉಚಿತವಾಗಿ ಲಸಿಕೆ ಹಾಕಿಸಬಹುದು ಎಂದು ಮಾಹಿತಿ ನೀಡಿದರು ಆರೋಗ್ಯ ಕಾರ್ಯಕರ್ತರು ಗ್ರಾಮೀಣ ಪ್ರದೇಶದಲ್ಲಿ 29 ರಿಂದ 30ರವರೆಗೆ ಹಾಗೂ ನಗರ ಪ್ರದೇಶದಲ್ಲಿ 29ರಿಂದ ಜುಲೈ 1ರವರೆಗೆ ಮನೆಗಳಿಗೆ ಭೇಟಿ ನೀಡಿ ಲಸಿಕೆ ಹಾಕಲಾಗುತ್ತದೆ ಎಂದು ತಿಳಿಸಿದರು ಉಪ ತಹಶೀಲ್ದಾರ್ ಸಿದ್ದಾರ್ಥ ಕಾರಂಜಿ, ಕ್ಷೇತ್ರ ಆರೋಗ್ಯ ಶಿಕ್ಷಣ ಅಧಿಕಾರಿ ಮೊಹಮ್ಮದ್ ಖಾಸಿಂ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಭಾಗವಹಿಸಿದ್ದರು

ಕುರುಗೋಡಿನಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಜಂಟಿ ದಾಳಿ: ಕಿಶೋರ ಕಾರ್ಮಿಕನ ರಕ್ಷಣೆ



ಬಳ್ಳಾರಿ,ಜೂ.25-

ಕುರುಗೋಡು ಪಟ್ಟಣದಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಬುಧವಾರ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯು ಹಠಾತ್ ದಾಳಿ ನಡೆಸಿ, ಓರ್ವ ಕಿಶೋರ ಕಾರ್ಮಿಕನನ್ನು ರಕ್ಷಿಸಲಾಗಿದೆ.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಕಂದಾಯ ಇಲಾಖೆ, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಪೊಲೀಸ್ ಇಲಾಖೆ ಹಾಗೂ ಚೈಲ್ಡ್‌ಲೈನ್ (ಮಕ್ಕಳ ಸಹಾಯವಾಣಿ) ಇಲಾಖೆಗಳ ಜಂಟಿ ಸಹಯೋಗದೊಂದಿಗೆ ಈ ಕಾರ್ಯಾಚರಣೆ ಕೈಗೊಳ್ಳಲಾಗಿತ್ತು.

20ಕ್ಕೂ ಹೆಚ್ಚು ಉದ್ದಿಮೆಗಳ ಪರಿಶೀಲನೆ:

ಕುರುಗೋಡು ಪಟ್ಟಣದ ಗೆಣಿಕೆಹಾಳ್ ರಸ್ತೆ, ಬಳ್ಳಾರಿ ರಸ್ತೆ, ಬಾದನಹಟ್ಟಿ ರಸ್ತೆ ಹಾಗೂ ಕಂಪ್ಲಿ ರಸ್ತೆಗಳಲ್ಲಿರುವ ಸುಮಾರು 20ಕ್ಕೂ ಹೆಚ್ಚು ವಾಣಿಜ್ಯ ಮತ್ತು ಕೈಗಾರಿಕಾ ಉದ್ದಿಮೆಗಳಿಗೆ ಅಧಿಕಾರಿಗಳ ತಂಡ ಭೇಟಿ ನೀಡಿ ತಪಾಸಣೆ ನಡೆಸಿತು.

ಈ ವೇಳೆ ಪಟ್ಟಣದ ಶ್ರೀ ವೆಂಕಟೇಶ್ವರ ಆಟೋ ಮೊಬೈಲ್ಸ್' ನಲ್ಲಿ ಕೆಲಸ ಮಾಡುತ್ತಿದ್ದ ಓರ್ವ ಕಿಶೋರ ಕಾರ್ಮಿಕನನ್ನು ಅಧಿಕಾರಿಗಳು ರಕ್ಷಿಸಿ, ಬಿಡುಗಡೆಗೊಳಿಸಿದರು. ರಕ್ಷಿಸಲ್ಪಟ್ಟ ಬಾಲಕನನ್ನು ಆತ ಈ ಹಿಂದೆ ವ್ಯಾಸಂಗ ಮಾಡುತ್ತಿದ್ದ ಅದೇ ಶಾಲೆಗೆ ಮರು ದಾಖಲಿಸಿ, ಶಿಕ್ಷಣ ಮುಂದುವರಿಸಲು ಕ್ರಮ ಕೈಗೊಳ್ಳಲಾಗಿದೆ.

ಮಾಲೀಕರ ವಿರುದ್ಧ ಕಾನೂನು ಕ್ರಮ:

ಮಕ್ಕಳ ವಯಸ್ಸಿನ ಅಧಿಕೃತ ದಾಖಲಾತಿಗಳನ್ನು ಪರಿಶೀಲಿಸಲಾಗುತ್ತಿದ್ದು, ಬಾಲಕಾರ್ಮಿಕರನ್ನು ಕೆಲಸಕ್ಕೆ ಇಟ್ಟುಕೊಂಡಿದ್ದ ಮಾಲೀಕರ ವಿರುದ್ಧ ಸಂಬಧಪಟ್ಟ ಪೊಲೀಸ್ ಠಾಣೆಯಲ್ಲಿ ಬಾಲಕಾರ್ಮಿಕ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇದೇ ಸಂದರ್ಭದಲ್ಲಿ ಅಂಗಡಿ ಮತ್ತು ಉದ್ದಿಮೆಗಳ ಮಾಲೀಕರಿಗೆ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಕೆಲಸಕ್ಕೆ ನೇಮಿಸಿಕೊಳ್ಳಬಾರದು ಎಂದು ಎಚ್ಚರಿಕೆ ನೀಡಿ, ಜಾಗೃತಿ ಪೋಸ್ಟರ್‌ಗಳನ್ನು ವಿತರಿಸಲಾಯಿತು.

ಈ ಜಂಟಿ ಟಾಸ್ಕ್ ಫೋರ್ಸ್ ಕಾರ್ಯಾಚರಣೆಯಲ್ಲಿ ಬಳ್ಳಾರಿ 2ನೇ ವೃತ್ತದ ಕಾರ್ಮಿಕ ನಿರೀಕ್ಷಕ ಪರಶುರಾಮ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ನಿರ್ದೇಶಕ ಎ.ಮೌನೇಶ್, ಶಿಕ್ಷಣ ಇಲಾಖೆಯ ಸಂಪನ್ಮೂಲ ವ್ಯಕ್ತಿ ಜಡೇಶ್, ಕಂದಾಯ ಇಲಾಖೆಯ ಶಿರಸ್ತೇದಾರ್ ವಿಜಯ ಕುಮಾರ್, ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ರವಿಕುಮಾರ್‌ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೇಲ್ವಿಚಾರಕಿ ಮಂಜುಳಾ ಹಾಗೂ ಮಕ್ಕಳ ಸಹಾಯವಾಣಿಯ ಜಿಲ್ಲಾ ಸಂಯೋಜಕ ಆನಂದ್ ಸೇರಿದಂತೆ ಪೊಲೀಸ್ ಸಿಬ್ಬಂದಿಗಳು ಉಪಸ್ಥಿತರಿದ್ದರು.



ಯೋಗದಿಂದ ವಿದ್ಯಾರ್ಥಿಗಳಲ್ಲಿ ಜ್ಞಾಪಕ ಶಕ್ತಿ ವೃದ್ಧಿ: ಇಸ್ವಿ ಪಂಪಾಪತಿ

ಬಳ್ಳಾರಿ,ಜೂ.25-

ಕೇಂದ್ರ ಸರ್ಕಾರದ ಮೇರಾ ಯುವ ಭಾರತ ಬಳ್ಳಾರಿ, ಜಿಲ್ಲಾ ಪತಂಜಲಿ ಯೋಗ ಸಮಿತಿ ಹಾಗೂ ಕರುಣ ರೂರಲ್ ಡೆವಲಪ್‌ಮೆಂಟ್ ಸೊಸೈಟಿ ಇವುಗಳ ಸಂಯುಕ್ತಾಶ್ರಯದಲ್ಲಿ ಬಳ್ಳಾರಿ ನಗರದ ಅಂಬೇಡ್ಕರ್ ಮತ್ತು ಬಿಸಿಎಂ ವಸತಿ ನಿಲಯದ ವಿದ್ಯಾರ್ಥಿಗಳಿಗೆ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಭಾನುವಾರ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಪತಂಜಲಿ ಯೋಗ ಪೀಠದ ರಾಜ್ಯ ಸಮಿತಿ ಸದಸ್ಯರಾದ ಇಸ್ವಿ ಪಂಪಾಪತಿ ಅವರು ಉದ್ಘಾಟಿಸಿದರು.

ಬಳಿಕ ವಿದ್ಯಾರ್ಥಿಗಳಿಗೆ ಯೋಗ, ಧ್ಯಾನ, ಆಸನ ಹಾಗೂ ಪ್ರಾಣಾಯಾಮಗಳನ್ನು ಮಾಡಿಸುವುದರ ಜೊತೆಗೆ ಅವುಗಳ ಮಹತ್ವವನ್ನು ಮನವರಿಕೆ ಮಾಡಿಕೊಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಯೋಗ ಅಭ್ಯಾಸದಿಂದ ಮನಸ್ಸಿಗೆ ಶಾಂತಿ ಮತ್ತು ನೆಮ್ಮದಿ ದೊರೆಯುತ್ತದೆ. ಉತ್ತಮ ಸಂಸ್ಕಾರ, ಸಂಸ್ಕೃತಿ, ಒಳ್ಳೆಯ ನಡತೆ ಹಾಗೂ ಜ್ಞಾಪಕ ಶಕ್ತಿ ವೃದ್ಧಿಸುವುದರ ಜೊತೆಗೆ ಆರೋಗ್ಯಕರ ಜೀವನ ಮತ್ತು ಆತ್ಮಸ್ಥೈರ್ಯ ವೃದ್ಧಿಯಾಗುತ್ತದೆ. ಹಾಗಾಗಿ ವಿದ್ಯಾರ್ಥಿಗಳು ನಿತ್ಯವೂ ಯೋಗಾಭ್ಯಾಸದಲ್ಲಿ ತೊಡಗಿಸಿಕೊಳ್ಳಬೇಕೆಂದು ಕರೆ ನೀಡಿದರು.

ಇದೇ ವೇಳೆ ಜಿಲ್ಲಾ ಪತಂಜಲಿ ಯೋಗ ಸಮಿತಿಯ ಉಪಾಧ್ಯಕ್ಷ ಕೆ. ಪ್ರಕಾಶ್ ಅವರು ವಿವಿಧ ಯೋಗಾಸನಗಳ ಪ್ರದರ್ಶನ ನೀಡಿ, ಅವುಗಳಿಂದಾಗುವ ಉಪಯುಕ್ತತೆಗಳ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಬಿಸಿಎಂ ವಸತಿ ನಿಲಯದ ವಾರ್ಡನ್ ದುರ್ಗಪ್ಪ, ಮಾಜಿ ಸೈನಿಕರಾದ ಈಶ್ವರ ರೆಡ್ಡಿ ಸೇರಿದಂತೆ ವಸತಿ ನಿಲಯದ ನೂರಾರು ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಂಡು ಯೋಗಾಭ್ಯಾಸ ನಡೆಸಿದರು.



ಶ್ರೀ ತಿಪ್ಪಣ್ಣಪ್ಪ ಕಮಕನೂರ ಅವರಿಗೆ ಸನ್ಮಾನ

ವಿಧಾನ ಪರಿಷತ್ ಗೆ ಸತತವಾಗಿ ಮೂರು ಬಾರಿ ವಿಧಾನ ಪರಿಷತ್ ಸದಸ್ಯರಾಗಿದ ಶ್ರೀ ತಿಪ್ಪಣ್ಣಪ್ಪ ಕಮಕನೂರ ಅವರಿಗೆ ಜನಸೇವೆ ಮಾಡಿದ ನಿಮ್ಮ ಅದ್ಭುತ ರಾಜಕೀಯ ಪಯಣಕ್ಕೆ ಹೃತ್ಪೂರ್ವಕ ಅಭಿನಂದನೆಗಳು. ನಿಮ್ಮ ನಾಯಕತ್ವ, ಜನಪರ ಚಿಂತನೆ ಮತ್ತು ಸೇವಾ ಮನೋಭಾವ ನಮ್ಮಂತಹ ಅನೇಕರಿಗೆ ಪ್ರೇರಣೆಯಾಗಿದೆ. ನಿಮಗೆ ಉತ್ತಮ ಆರೋಗ್ಯ, ಸುಖ-ಸಮೃದ್ಧಿ ಹಾಗೂ ಇನ್ನಷ್ಟು ಜನಸೇವೆ ಮಾಡುವ ಅವಕಾಶಗಳು ದೊರಕಲಿ ಎಂದು

.ಡಾ. ಫಾರೂಕ್ ಮಣೂರ ಅಹ್ಮದ್ ಸಾಮಾಜಿಕ ಕಾರ್ಯಕರ್ತರು ಸನ್ಮಾನ ಮಾಡಿದರು ಸಂದೇಶ ಟಿ ಕಮಕನೂರ ಉಪಸ್ಥಿತರಿದ್ದರು

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ



ಶೀಘ್ರದಲ್ಲಿ ಕಲಬುರಗಿಯಲ್ಲಿ ಮತ್ತೊಂದು ಬೃಹತ್ ಉದ್ಯೋಗ ಮೇಳ: ಸಚಿವ ಡಾ.ಶರಣಪ್ರಕಾಶ್ ಪಾಟೀಲ್

ಕಲಬುರಗಿ,ಜೂ.25-

ಕಲ್ಯಾಣ ಕರ್ನಾಟಕ ಭಾಗದ, ವಿಶೇಷವಾಗಿ ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಯ ನಿರುದ್ಯೋಗಿ ಯುವಕ-ಯುವತಿಯರಿಗೆ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಮತ್ತೊಂದು ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗುತ್ತಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಉದ್ಯೋಗ ಮೇಳದಲ್ಲಿ ಮರ್ಸಿಡಿಸ್ ಬೆಂಝ್, ಸ್ನೈಡರ್ ಎಲೆಕ್ಟ್ರಿಕ್, ಬಜಾಜ್ ಆಟೋ, ಜೆಸಿಬಿ, ಡಿ-ಮಾರ್ಟ್, ಮಹೀಂದ್ರಾ, ವರ್ಲ್‌ಪೂಲ್ ಸೇರಿದಂತೆ ದೇಶ-ವಿದೇಶಗಳ ಖ್ಯಾತ ಕಂಪನಿಗಳು ಭಾಗವಹಿಸುತ್ತಿದ್ದು, ಒಟ್ಟು 3,500ಕ್ಕೂ ಹೆಚ್ಚು ಹುದ್ದೆಗಳನ್ನು ಗುರುತಿಸಲಾಗಿದೆ. ಆಟೋಮೊಬೈಲ್, ಉತ್ಪಾದನೆ, ಎಂಜಿನಿಯರಿಂಗ್, ರಿಟೇಲ್, ಐಟಿ ಹಾಗೂ ಸೇವಾ ವಲಯದ ವಿವಿಧ ಹುದ್ದೆಗಳಿಗೆ ನೇಮಕಾತಿ ನಡೆಯಲಿದೆ. ಆಯ್ಕೆಯಾಗುವ ಅಭ್ಯರ್ಥಿಗಳಿಗೆ ಬೆಂಗಳೂರು, ಪುಣೆ ಮತ್ತು ಹೈದರಾಬಾದ್‌ನಲ್ಲಿ ಕೆಲಸ ಮಾಡಲು ಸುವರ್ಣಾವಕಾಶವಿದೆ ಎಂದು ಹೇಳಿದರು. 10ನೇ, 12ನೇ, , ಡಿಪ್ಲೊಮಾ ಹಾಗೂ ಪದವೀಧರರಿಗೆ, https://forms.gle/8XCtqKmTmd7KZrW77 ಈ ನೋಂದಣಿ ಲಿಂಕ್ ಬಳಸಬೇಕು.B.E / B.Tech ವಿದ್ಯಾರ್ಥಿಗಳಿಗೆ https://forms.gle/:ikTzHpfLRN8KqJUg8 ಈ ನೋಂದಣಿ ಲಿಂಕ್ ಬಳಸಿಕೊಂಡು ನೋಡಣಿ ಮಾಡಿಕೊಳ್ಳಬಹುದು.

ಶೀಘ್ರದಲ್ಲೇ 56,000 ಸರ್ಕಾರಿ ಹುದ್ದೆಗಳ ಭರ್ತಿ : ಇದೇ ಸಂದರ್ಭದಲ್ಲಿ ಮಾತನಾಡಿದ ಸಚಿವರು, ರಾಜ್ಯದಲ್ಲಿ ಖಾಲಿ ಇರುವ 56,000ಕ್ಕೂ ಹೆಚ್ಚು ಸರ್ಕಾರಿ ಹುದ್ದೆಗಳನ್ನು ನಿಗದಿತ ಕಾಲಮಿತಿಯೊಳಗೆ ಭರ್ತಿ ಮಾಡಲು ಮುಖ್ಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದ್ದು, ಶೀಘ್ರದಲ್ಲೇ ನೇಮಕಾತಿ ಪ್ರಕ್ರಿಯೆ ಆರಂಭವಾಗಲಿದೆ ಎಂದರು.

ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರಿಂದ ಜೂನ್ 25ರಂದು ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಿದ 33 ಸ್ಪಿಲ್‌ವೇ ಗೇಟುಗಳ ಲೋಕಾರ್ಪಣೆ



ಕೊಪ್ಪಳ ಜೂ.25-

ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಿದ 33 ಸ್ಪಿಲ್‌ವೇ ಗೇಟುಗಳ ಲೋಕಾರ್ಪಣೆ ಕಾರ್ಯಕ್ರಮವು ಜೂನ್ 25ರಂದು ಬೆಳಿಗ್ಗೆ 11 ಗಂಟೆಗೆ ನಡೆಯಲಿದ್ದು, ಸನ್ಮಾನ್ಯ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಸ್ಪಿಲ್ ವೇ ಗೇಟುಗಳನ್ನು ಲೋಕಾರ್ಪಣೆಗೊಳಿಸುವರು.

ಜಲಸಂಪನ್ಮೂಲ ಇಲಾಖೆ ವತಿಯಿಂದ ಕೊಪ್ಪಳ ಜಿಲ್ಲೆಯ ಮುನಿರಾಬಾದ್ ಸರ್ಕಾರಿ ಹೈಸ್ಕೂಲ್ ಗ್ರೌಂಡ್ ನಲ್ಲಿ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಭಾರತ ಸರ್ಕಾರದ ಕೇಂದ್ರ ಜಲಶಕ್ತಿ ಸಚಿವರಾದ ಸಿ.ಆರ್. ಪಾಟೀಲ್, ಆಂಧ್ರ ಪ್ರದೇಶ ಮುಖ್ಯಮಂತ್ರಿಗಳಾದ ಎನ್.ಚಂದ್ರಬಾಬು ನಾಯ್ಡು, ತೆಲಂಗಾಣ ಮುಖ್ಯಮಂತ್ರಿ ಗಳಾದ ಎ.ರೇವಂತ್ ರೆಡ್ಡಿ, ಕರ್ನಾಟಕ ಉಪ ಮುಖ್ಯಮಂತ್ರಿಗಳಾದ ಡಾ. ಜಿ.ಪರಮೇಶ್ವರ್ ಆಂಧ್ರಪ್ರದೇಶ ಉಪ ಮುಖ್ಯಮಂತ್ರಿ ಗಳಾದ ಕೆ.ಪವನ್ ಕಲ್ಯಾಣ್, ತೆಲಂಗಾಣ ಉಪ ಮುಖ್ಯಮಂತ್ರಿಗಳಾದ ಮಲ್ಲು ಭಟ್ಟಿ ವಿಕ್ರಮಾರ್ಕ, ಭಾರತ ಸರ್ಕಾರದ ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆಗಳ ರಾಜ್ಯ ಸಚಿವರಾದ ವಿ. ಸೋಮಣ್ಣ, ಕೇಂದ್ರ ಜಲಶಕ್ತಿ ಖಾತೆ ರಾಜ್ಯ ಸಚಿವರಾದ ರಾಜ ಭೂಷಣ್ ಚೌಧರಿ, ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಎಸ್ ಹೊರಟ್ಟಿ, ಕರ್ನಾಟಕ ಸರ್ಕಾರದ ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆ ಸಚಿವರಾದ ರಾಮಲಿಂಗಾ ರೆಡ್ಡಿ, ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ-ಗದಗ ಲೋಕಸಭಾ ಕ್ಷೇತ್ರ ಸಂಸದರಾದ ಬಸವರಾಜ ಬೊಮ್ಮಾಯಿ, ಆಂಧ್ರಪ್ರದೇಶದ ಜಲಸಂಪನ್ಮೂಲ ಇಲಾಖೆ ಸಚಿವರಾದ ಡಾ. ನಿಮ್ಮಲ ರಾಮನಾಯ್ಡು, ಆಂಧ್ರ ಪ್ರದೇಶದ ಹಣಕಾಸು, ಯೋಜನೆ, ವಾಣಿಜ್ಯ ತೆರಿಗೆ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವರಾದ ಪಯ್ಯವುಲ ಕೇಶವ್, ತೆಲಂಗಾಣದ ನೀರಾವರಿ ಇಲಾಖೆ ಹಾಗೂ ಸಿಎಡಿ ಸಚಿವರಾದ ಎನ್.ಉತ್ತಮ್ ಕುಮಾರ ರೆಡ್ಡಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ಶಾಸಕರಾದ ಸಲೀಂ ಅಹಮದ್ ಅವರು ಘನ ಉಪಸ್ಥಿತಿ ವಹಿಸುವರು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ರಾಘವೇಂದ್ರ ಹಿಟ್ನಾಳ್ ಅವರು ಸಮಾರಂಭದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕೊಪ್ಪಳ ಸಂಸದರಾದ ಕೆ. ರಾಜಶೇಖರ ಹಿಟ್ನಾಳ್, ಬಾಗಲಕೋಟೆ ಸಂಸದರಾದ ಪಿ.ಸಿ. ಗದ್ದಿಗೌಡರ, ಬಳ್ಳಾರಿ ಸಂಸದರಾದ ಈ. ತುಕಾರಾಮ್, ದಾವಣಗೆರೆ ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್, ರಾಯಚೂರು ಸಂಸದರಾದ ಜಿ.ಕುಮಾರ್ ನಾಯಕ್, ಬಳ್ಳಾರಿ ರಾಜ್ಯಸಭಾ ಸದಸ್ಯರಾದ ಡಾ. ಸೈಯದ್ ನಾಸಿರ್ ಹುಸೇನ್ ಹಾಗೂ ಕೊಪ್ಪಳ, ವಿಜಯನಗರ, ಬಳ್ಳಾರಿ, ರಾಯಚೂರು ಮತ್ತು ಗದಗ ಜಿಲ್ಲಾ ವ್ಯಾಪ್ತಿಯ ಎಲ್ಲಾ ವಿಧಾನಸಭೆ ಹಾಗೂ ವಿಧಾನ ಪರಿಷತ್ ಶಾಸಕರುಗಳು, ಎಲ್ಲಾ ಚುನಾಯಿತ ಜನಪ್ರತಿನಿಧಿ ಗಳು ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

ತುಂಗಭದ್ರಾ ಜಲಾಶಯದ ನೂತನ ಸ್ಪಿಲ್ ವೇ ಗೇಟುಗಳ ಲೋಕಾರ್ಪಣೆ ಕಾರ್ಯಕ್ರಮ ಸಂಸದರು, ಶಾಸಕರಿಂದ ಅಂತಿಮ ಹಂತದ ಸಿದ್ಧತೆ ಪರಿಶೀಲನೆ

ಕೊಪ್ಪಳ ಜೂ.25-

ಜೂನ್ 25ರಂದು ನಡೆಯಲಿರುವ ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಿದ 33 ಸ್ಪಿಲ್‌ವೇ ಗೇಟುಗಳ ಲೋಕಾರ್ಪಣೆ ಕಾರ್ಯಕ್ರಮದ ಅಂಗವಾಗಿ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲೆಯ ಸಂಸದರಾದ ಕೆ.ರಾಘವೇಂದ್ರ ಹಿಟ್ನಾಳ, ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ರಾಯಚೂರು ವಿಧಾನ ಪರಿಷತ್ ಶಾಸಕರಾದ ಎನ್.ಎಸ್. ಭೋಸರಾಜು ಅವರು ವೇದಿಕೆ ಸ್ಥಳದ ಅಂತಿಮ ಹಂತದ ಸಿದ್ದತೆಯನ್ನು ಪರಿಶೀಲಿಸಿದರು.



ಈ ವೇಳೆ ಕೊಪ್ಪಳ ಶಾಸಕರಾದ ರಾಘವೇಂದ್ರ ಹಿಟ್ನಾಳ, ಸಂಸದ ರಾಜಶೇಖರ ಹಿಟ್ನಾಳ ಹಾಗೂ ವಿಧಾನ ಪರಿಷತ್ ಶಾಸಕರಾದ ಎನ್.ಎಸ್. ಭೋಸರಾಜು ಅವರು ಕಾರ್ಯಕ್ರಮದ ಯಶಸ್ವಿ ಆಯೋಜನೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭ ಸ್ಥಳದಲ್ಲಿದ್ದ ಜಿಲ್ಲಾಧಿಕಾರಿಗಳಾದ ಡಾ. ಸುರೇಶ್ ಬಿ. ಇಟ್ನಾಳ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವರ್ಣಿತ್ ನೇಗಿ, ಬಳ್ಳಾರಿ ವಲಯದ ಐಜಿಪಿ ಡಾ.ಪಿ.ಎಸ್. ಹರ್ಷ, ಗಂಗಾವತಿ ಡಿವೈಎಸ್ಪಿ ನ್ಯಾಮಗೌಡ ಹಾಗೂ ಕೊಪ್ಪಳ ಡಿವೈಎಸ್‌ಪಿ ಮುತ್ತಣ್ಣ ಸವರಗೋಳ ಅವರು ವೇದಿಕೆ,

ಭದ್ರತಾ ವ್ಯವಸ್ಥೆ, ವಾಹನ ನಿಲುಗಡೆ, ಸಂಚಾರ ನಿರ್ವಹಣೆ, ಕುಡಿಯುವ ನೀರು, ವಿದ್ಯುತ್ ಹಾಗೂ ಸಾರ್ವಜನಿಕರ ಸೌಲಭ್ಯಗಳ ಕುರಿತು ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು. ಕೊಪ್ಪಳ ನಗರಸಭೆಯ ಮಾಜಿ ಅಧ್ಯಕ್ಷರಾದ ಅಮ್ಜದ್ ಪಟೇಲ್ ಹಾಜರಿದ್ದರು.

ಕಾರ್ಯಕ್ರಮಕ್ಕೆ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಸೇರಿದಂತೆ ವಿವಿಧ ಗಣ್ಯರು ಆಗಮಿಸುವ ಹಿನ್ನೆಲೆಯಲ್ಲಿ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲಾಗಿದೆ. ಪೊಲೀಸ್ ಇಲಾಖೆ, ನೀರಾವರಿ ಇಲಾಖೆ, ಆರೋಗ್ಯ ಇಲಾಖೆ, ಅಗ್ನಿಶಾಮಕ ದಳ ಹಾಗೂ ವಿವಿಧ ಇಲಾಖೆಗಳ ಸಿಬ್ಬಂದಿ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುತ್ತಿದ್ದು, ಕಾರ್ಯಕ್ರಮಕ್ಕೆ ಅಗತ್ಯವಿರುವ ಎಲ್ಲ ಸಿದ್ಧತೆಗಳನ್ನು ಪೂರ್ಣಗೊಳಿಸಲಾಗುತ್ತಿದೆ. ಈ ಮಹತ್ವದ ಸಮಾರಂಭಕ್ಕೆ ಸಾವಿರಾರು ಜನರು ಆಗಮಿಸುವ ನಿರೀಕ್ಷೆಯಿದ್ದು, ಸುಗಮ ಸಂಚಾರ ಮತ್ತು ಭದ್ರತೆಗೆ ವಿಶೇಷ ವ್ಯವಸ್ಥೆಗಳನ್ನು ಮಾಡಲಾಗಿದೆ.

ವಿದ್ಯುತ್ ಖಾಸಗೀಕರಣ ವಿರೋಧಿಸಿ ಕಾಳಗಿಯಲ್ಲಿ ರೈತರ ಪ್ರತಿಭಟನೆ

ಕಾಳಗಿ,ಜೂ.25-

ವಿದ್ಯುತ್ ಕ್ಷೇತ್ರದ ಖಾಸಗೀಕರಣವನ್ನು ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ರೈತ ಸೇನೆ ಹಾಗೂ ಭಾರತೀಯ ಕಿಸಾನ್ ಸಂಘದ ನೇತೃತ್ವದಲ್ಲಿ ಕಾಳಗಿಯಲ್ಲಿ ಬುಧವಾರ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ತಹಶೀಲ್ದಾರ್ ಕಚೇರಿ ಮುಂಭಾಗದಲ್ಲಿ ಜಮಾಯಿಸಿದ ರೈತರು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿರುದ್ಧ ದಿಕ್ಕಾರದ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ರೈತ ಸೇನೆಯ ತಾಲೂಕು ಅಧ್ಯಕ್ಷ ವೀರಣ್ಣ ಗಂಗಾಣಿ, ಡಾ. ಬಿ.ಆರ್. ಅಂಬೇಡ್ಕರ್ ಅವರು ವಿದ್ಯುಚ್ಛಕ್ತಿ, ನೀರು, ಲೋಕೋಪಯೋಗಿ ಸೇರಿದಂತೆ ಸಾರ್ವಜನಿಕ ಸೇವಾ ಸಂಸ್ಥೆಗಳು ಸರ್ಕಾರದ ಹಿಡಿತದಲ್ಲಿಯೇ ಕಾರ್ಯನಿರ್ವಹಿಸಬೇಕು ಎಂದು ಪ್ರತಿಪಾದಿಸಿದ್ದರು. ಲಾಭದ ಉದ್ದೇಶದಿಂದ ಇಂತಹ ಸಂಸ್ಥೆಗಳನ್ನು ಖಾಸಗಿ ವಲಯಕ್ಕೆ ನೀಡಬಾರದು ಎಂದು ಅವರು ಹೇಳಿದ್ದರು ಎಂದು ತಿಳಿಸಿದರು. ವಿದ್ಯುತ್ ಖಾಸಗೀಕರಣವು ಜನವಿರೋಧಿ ನೀತಿಯಾಗಿದ್ದು, ಟಾಟಾ ಪವರ್ ಕಂಪನಿ ಲಿಮಿಟೆಡ್ ಸಲ್ಲಿಸಿರುವ ಅರ್ಜಿಯನ್ನು ರಾಜ್ಯ ಸರ್ಕಾರ ತಿರಸ್ಕರಿಸಬೇಕು. ರಾಜ್ಯದ ರೈತರು ಹಾಗೂ ಗ್ರಾಹಕರ ಹಿತ ದೃಷ್ಟಿಯಿಂದ ಯಾವುದೇ ಕಾರಣಕ್ಕೂ ವಿದ್ಯುತ್ ಸರಬರಾಜು ವ್ಯವಸ್ಥೆಯನ್ನು ಖಾಸಗೀಕರಣಗೊಳಿಸಬಾರದು ಎಂದು ಆಗ್ರಹಿಸಿದರು.

ರಾಜ್ಯದ 15 ಜಿಲ್ಲೆಗಳಲ್ಲಿ ವಿದ್ಯುತ್ ಸರಬರಾಜು ವ್ಯವಸ್ಥೆಯನ್ನು ಖಾಸಗೀಕರಣಗೊಳಿಸುವ ಪ್ರಸ್ತಾವವನ್ನು ತೀವ್ರವಾಗಿ ಖಂಡಿಸುವುದಾಗಿ ತಿಳಿಸಿದ ಅವರು, ಪ್ರಸ್ತುತ ಲಕ್ಷಾಂತರ ರೈತರ ಪಂಪ್‌ಸೆಟ್‌ಗಳಿಗೆ ಹಾಗೂ ಗ್ರಾಮೀಣ ಪ್ರದೇಶಗಳಿಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ. ಖಾಸಗೀಕರಣಗೊಂಡರೆ ವಿದ್ಯುತ್ ಖರೀದಿ ದುಬಾರಿಯಾಗಿ ರೈತರು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ಭಾರತೀಯ ಕಿಸಾನ್ ಸಂಘದ ನಗರ ಘಟಕದ ಅಧ್ಯಕ್ಷ ಭೀಮರಾಯ ಮಲಘಾಣ ಮಾತನಾಡಿ, ''ಈ ನೆಲ ನಮ್ಮದು, ಈ ಜಲ ನಮ್ಮದು. ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವುದು ರೈತರು ಮತ್ತು ಸಾಮಾನ್ಯ ಜನರ ಹಿತಾಸಕ್ತಿಗೆ ವಿರುದ್ಧವಾಗಿದೆ. ಖಾಸಗಿ ಕಂಪನಿಗಳಿಂದ ವಿದ್ಯುತ್ ದರ ಏರಿಕೆಯಾಗುವ ಸಾಧ್ಯತೆ ಇದ್ದು, ಇದು ರೈತರ ಬದುಕಿನ ಮೇಲೆ ಗಂಭೀರ ಪರಿಣಾಮ ಬೀರುತ್ತದೆ'' ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯ ಬಳಿಕ ತಹಶೀಲ್ದಾರ್ ಪೃಥ್ವಿರಾಜ್ ಪಾಟೀಲ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು. ರೈತರಾದ ಸೂರ್ಯಕಾಂತ ಕಟ್ಟಿಮನಿ, ಸುಂದರ ಡಿ ಸಾಗರ, ನಿಂಗಪ್ಪ ನಾಮದಾರ, ರಾಜು ಮುಗಳಿ, ಮಲ್ಲಿನಾಥ ಹಲಚೇರಾ, ಮಲ್ಲಿಕಾರ್ಜುನ ಗಂವ್ಹಾರ, ಕರಣ ರಾಜಾಪೂರ, ಸೇರಿ ಅನೇಕರು ಇದ್ದರು.

ಮೊಹರಂ ಹಬ್ಬದ ಆಚರಣೆ ಪ್ರಯುಕ್ತ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿಗಳ ಆದೇಶ

ಕೊಪ್ಪಳ ಜೂ.25-

ಜಿಲ್ಲೆಯಾದ್ಯಂತ ಮೊಹರಂ ಹಬ್ಬದ ಆಚರಣೆಯ ಪ್ರಯುಕ್ತ ಯಾವುದೇ ರೀತಿಯ ಅಹಿತಕರ ಘಟನೆಗಳು ಜರುಗದಂತೆ ಕಾನೂನು ಸುವ್ಯವಸ್ಥೆ, ಶಾಂತಿ ಪಾಲನೆಗಾಗಿ ಮತ್ತು ಸಾರ್ವಜನಿಕರ ಹಿತಾಸಕ್ತಿ ಕಾಪಾಡುವ ಹಿತದೃಷ್ಠಿಯಿಂದ ಕರ್ನಾಟಕ ಅಬಕಾರಿ ಕಾಯ್ದೆ-1965 ರ ಕಲಂ 21 ರನ್ವಯ ಜೂನ್ 25 ರ ಬೆಳಿಗ್ಗೆ 6 ಗಂಟೆಯಿದ ಜೂನ್ 26 ರ ರಾತ್ರಿ 11 ಗಂಟೆಯವರೆಗೆ ಕೊಪ್ಪಳ ಜಿಲ್ಲೆಯಾದ್ಯಂತ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಡಾ.ಸುರೇಶ ಬಿ.ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.

ಆದೇಶದನ್ವಯ ಅಬಕಾರಿ ಉಪ ಆಯುಕ್ತರ ನೇತೃತ್ವದಲ್ಲಿ ತನಿಖಾ ತಂಡವನ್ನು ರಚಿಸಿ, ಅದರಲ್ಲಿ ಆರಕ್ಷಕರ ವೃತ್ತ ನಿರೀಕ್ಷಕರು ಹಾಗೂ ಅಬಕಾರಿ ವೃತ್ತ ನಿರೀಕ್ಷಕರು ಕಾರ್ಯನಿರ್ವಹಿಸಲು ಸೂಚಿಸಿದೆ.

ನಿಮ್ಮೂರು ಸುದ್ದಿ

ಸಂಪಾದಕೀಯ



ಅಡಿಕೆಗೆ ಆದ್ಯತೆ, ಆಹಾರಬೆಳೆಗಳ ಕೊರತೆ ಮತ್ತು ಬೆಲೆ ಏರಿಕೆ

ಕರ್ನಾಟಕದಲ್ಲಿ ಅಡಿಕೆ ಬೆಳೆ ಆರ್ಥಿಕವಾಗಿ ಬಲಿಷ್ಠ ಸ್ಥಿತಿಯಲ್ಲಿರಬಹುದು. ಆದರೆ, ನೀರಿನ ಲಭ್ಯತೆ, ರೋಗಬಾಧೆ, ಬೆಲೆಗಳ ಅನಿಶ್ಚಿತತೆಯನ್ನು ಅಲಕ್ಷಿಸುವಂತಿಲ್ಲ. ಹಾಗೆಯೇ ಕೃಷಿಕರು ವಾಣಿಜ್ಯ ಬೆಳೆಗಳತ್ತ ಒಲವು ಹೊಂದುವುದು, ಆಹಾರ ಬೆಳೆಗಳ ಕುಸಿತದಂತಹ ದೀರ್ಘಕಾಲೀನ ಸವಾಲು ಎದುರಾಗುವುದನ್ನು ನಿರ್ಲಕ್ಷಿಸುವಂತಿಲ್ಲ. ಬೆಲೆ ಏರಿಕೆಯಿಂದ ಆಗುವ ಅನಾಹುತವನ್ನು, ಅಧ್ವಾನವನ್ನು ಅಂದಾಜು ಮಾಡಲಾಗುವುದಿಲ್ಲ.

ಎಲ್ ನಿನೊ ಪರಿಣಾಮದಿಂದ ಈ ಬಾರಿಯ ಮುಂಗಾರು ಹಂಗಾಮಿಗೆ ಶೇ. 43ರಷ್ಟು ಮಳೆ ಕೊರತೆ ಕಾಡಲಿದೆ. ಕರ್ನಾಟಕವೂ ಸೇರಿದಂತೆ 12 ರಾಜ್ಯಗಳ 315 ಜಿಲ್ಲೆಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆ ಬೀಳಲಿದ್ದು, ರೈತರು ಕಡಿಮೆ ನೀರು ಬೇಡುವ, ಪ್ರತಿಕೂಲ ಹವಾಮಾನವನ್ನು ತಾಳಿಕೊಳ್ಳುವ ಬೆಳೆಗಳನ್ನು ಬೆಳೆಯಬೇಕೆಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸೂಚಿಸಿದ್ದಾರೆ.

ಕರ್ನಾಟಕದಲ್ಲಿ ಅಡಿಕೆ ಬೆಳೆ ವಿಸ್ತೀರ್ಣ ವೇಗವಾಗಿ ಹೆಚ್ಚುತ್ತಿರುವುದರಿಂದ ಮುಂದಿನ ಐದತ್ತು ವರ್ಷಗಳಲ್ಲಿ ಉತ್ಪಾದನೆ ಹೆಚ್ಚಾಗಿ ದರ ಕುಸಿತದ ಅಪಾಯ ಎದುರಾಗಬಹುದೆಂದು ಕೃಷಿ ತಜ್ಞರು ಎಚ್ಚರಿಸಿದ್ದಾರೆ.

ರಾಜ್ಯದಲ್ಲಿ ಈ ಬಾರಿ ಮುಂಗಾರು ಕೈ ಕೊಟ್ಟಿದೆ. ಕೆಲವು ಕಡೆ ಅತಿವೃಷ್ಟಿ, ಹಲವೆಡೆ ಅನಾವೃಷ್ಟಿ ಕಾಣಿಸಿಕೊಂಡಿದೆ. ಪರಿಣಾಮವಾಗಿ ಒಂದು ಕಡೆ, ಬೆಳೆ ನಾಶವಾಗಿ ಕೃಷಿಕರು ಕಷ್ಟಕ್ಕೆ ಸಿಲುಕಿದರೆ; ಮತ್ತೊಂದು ಕಡೆ, ದಿನನಿತ್ಯ ಬಳಕೆಯ ಆಹಾರ ಧಾನ್ಯ-ಹಣ್ಣು-ಸೊಪ್ಪು-ತರಕಾರಿ ಬೆಲೆ ಗಗನಕ್ಕೇರಿ ಗ್ರಾಹಕರ ಜೇಬಿಗೆ ಕತ್ತರಿ ಬಿದ್ದಿದೆ.

ಮೇಲಿನ ಮೂರು ಸುದ್ದಿಗಳಲ್ಲಿ ಒಂದು ಅಂಶ ಸ್ಪಷ್ಟವಾಗುತ್ತದೆ- ಅದು ಹವಾಮಾನ ವೈಪರೀತ್ಯ. ಅದನ್ನು ಅರಿತು ಅಳವಡಿಸಿಕೊಳ್ಳದ ಕೃಷಿ ಕ್ಷೇತ್ರ. ಅದು ನೇರವಾಗಿ ಕೃಷಿ ಉತ್ಪನ್ನಗಳ ಮೇಲೆ ಪರಿಣಾಮ ಬೀರುತ್ತದೆ. ಅದರಿಂದ ಬೆಲೆ ಏರಿಳಿತಗಳು, ಬೆಳೆಯುವವರ-ಬಳಸುವವರ ಬದುಕಿನ ಮೇಲೆ ದುಷ್ಪರಿಣಾಮ ಉಂಟು ಮಾಡುತ್ತದೆ. ದೇಶದ ಆರ್ಥಿಕತೆ ಏರುಪೇರು ಆಗುತ್ತದೆ. ಒಟ್ಟಿನಲ್ಲಿ ಸಮಸ್ಯೆಗಳ ಸರಪಳಿಯೇ ಸೃಷ್ಟಿಯಾಗುತ್ತದೆ.

ಇಷ್ಟಾದರೂ ನಮ್ಮ ಜನಕ್ಕೆ ಮಳೆನೀರು-ಅಂತರ್ಜಲ ಅಮೂಲ್ಯ ಎನಿಸಿಲ್ಲ. ನೀರನ್ನು ಪೋಲು ಮಾಡಬಾರದು, ಸದ್ಬಳಕೆ ಮಾಡಿಕೊಳ್ಳಬೇಕು ಎನ್ನುವುದನ್ನು ಕಲಿಯಲಿಲ್ಲ. ರೈತರು ಮಿಶ್ರ ಬೇಸಾಯ ಬಿಟ್ಟು ಏಕಬೆಳೆಯತ್ತ- ವಾಣಿಜ್ಯ ಬೆಳೆಯತ್ತ ವಾಲುವುದು ನಿಂತಿಲ್ಲ. ಇದರಿಂದ ಹತ್ತು ಹಲವು ಸಮಸ್ಯೆಗಳಿಗೆ ಸಿಲುಕುವುದನ್ನು ಯಾವ ಸರ್ಕಾರಗಳೂ ತಡೆಯಲಾಗುತ್ತಿಲ್ಲ.

ಈಗ ರಾಜ್ಯದಲ್ಲಿ ಎಲ್ಲರಿಗೂ ಅಡಿಕೆ ಬೆಳೆಯುವ ಹುಚ್ಚು ಹತ್ತಿದೆ. ಒಂದು ಕ್ವಿಂಟಾಲ್ ಅಡಿಕೆಗೆ 35ರಿಂದ 89 ಸಾವಿರದವರೆಗೆ ಬೆಲೆ- ಎಂದಾಕ್ಷಣ, ಎಲ್ಲರೂ ಅಡಿಕೆಯತ್ತ ಆಕರ್ಷಿತರಾಗುತ್ತಿದ್ದಾರೆ. ಒಂದೇ ವರ್ಷದಲ್ಲಿ ಸುಮಾರು 49 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಆಹಾರ ಬೆಳೆಗಳ ಪ್ರಮಾಣ ಕುಸಿದಿದೆ. ಹಾಗೆಯೇ ಅಷ್ಟೇ ಪ್ರಮಾಣದಲ್ಲಿ ಅಡಿಕೆ ಬೆಳೆ ವಿಸ್ತೀರ್ಣದಲ್ಲಿ ಗಮನಾರ್ಹ ಏರಿಕೆ ಕಂಡುಬಂದಿದೆ.

ಜೊತೆಗೆ ಭಾರತವು ಅಡಿಕೆಯ ಪ್ರಮುಖ ಉತ್ಪಾದಕ ದೇಶಗಳಲ್ಲಿ ಒಂದಾಗಿದ್ದು, ಯುಎಇ, ಮಲೇಷ್ಯಾ, ಶ್ರೀಲಂಕಾ, ಯುಕೆ ಮತ್ತು ಅಮೆರಿಕಕ್ಕೆ ರಫ್ತು ಮಾಡುತ್ತದೆ. 202324ರಲ್ಲಿ ಭಾರತ ಸುಮಾರು 10,636 ಮೆಟ್ರಿಕ್ ಟನ್ ಅಡಿಕೆ ರಫ್ತು ಮಾಡಿ ಸುಮಾರು 48 ಮಿಲಿಯನ್ ಡಾಲರ್ ಆದಾಯ ಗಳಿಸಿದೆ.

ಹಣ್ಣು, ತರಕಾರಿ, ಸಾಂಬಾರು ಪದಾರ್ಥ, ಹೂ, ಔಷಧೀಯ ಗಿಡಗಳನ್ನು ತೋಟಗಾರಿಕೆ ಬೆಳೆಗಳೆಂದು ಪರಿಗಣಿಸಲಾಗಿದೆ. ಆದರೆ, ಈ ಬೆಳೆಗಳಿಂದ ಬರುವ ಆದಾಯ ಅಡಿಕೆಗೆ ಹೋಲಿಸಿದರೆ ಚಿಲ್ಲರೆ ಕಾಸಿನದು. ಕ್ವಿಂಟಾಲ್‌ಗೆ 40ರಿಂದ 80 ಸಾವಿರ ತರುವ ಅಡಿಕೆ ಆಸೆ ಹುಟ್ಟಿಸುವಂಥದ್ದು. ಇದರಿಂದಾಗಿ ಕಳೆದ ಕೆಲವು ವರ್ಷಗಳಲ್ಲಿ ರೈತರು ಭತ್ತ, ಜೋಳ, ರಾಗಿ, ದ್ವಿದಳ ಧಾನ್ಯಗಳು ಮುಂತಾದ ಆಹಾರ ಬೆಳೆಗಳನ್ನು ಬೆಳೆಯುವುದನ್ನು ಕೈಬಿಡುತ್ತಿದ್ದಾರೆ. ಅಡಿಕೆ ಬೆಳೆಯತ್ತ ಒಲವು ತೋರುತ್ತಿದ್ದಾರೆ. ಇದರಿಂದಾಗಿ ಅಡಿಕೆ ಬೆಳೆಯ ವಿಸ್ತೀರ್ಣ ದಿನದಿಂದ ದಿನಕ್ಕೆ ವೇಗವಾಗಿ ವಿಸ್ತರಿಸುತ್ತಿದೆ. ಈ ಮೊದಲು ಶಿವಮೊಗ್ಗ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ದಾವಣಗೆರೆ ಜಿಲ್ಲೆಗಳಲ್ಲಿ ಅಡಿಕೆ ಬೆಳೆಯುತ್ತಿದ್ದರು. ಈಗ ನೆರೆಯ ಹಾವೇರಿ, ವಿಜಯನಗರ, ಚಿತ್ರದುರ್ಗ, ಧಾರವಾಡ, ಬಾಗಲಕೋಟೆ, ಗದಗ, ತುಮಕೂರು ಹಾಗೂ ಮೈಸೂರು ಜಿಲ್ಲೆಗಳ ರೈತರೂ ಅಡಿಕೆಯ ಸಮೃದ್ಧಿಗೆ ಮಾರು ಹೋಗುತ್ತಿದ್ದಾರೆ.

ರೈತರು ಅಡಿಕೆಯತ್ತ ಆಕರ್ಷಿತರಾಗುವುದಕ್ಕೆ ಮುಖ್ಯ ಕಾರಣ, ಅದು ಲಾಭದಾಯಕ ವಾಣಿಜ್ಯ ಬೆಳೆಯಾಗಿರುವುದು. ಕೆಲ ಬುದ್ಧಿವಂತ ರೈತರು ಅಂತರ ಬೆಳೆಗಳಾಗಿ ಕರಿಮೆಣಸು, ಕೋಕೋ, ಬಾಳೆ, ಅನಾನಸ್ ಮುಂತಾದ ಬೆಳೆಗಳನ್ನು ಬೆಳೆಸಿ ಹೆಚ್ಚುವರಿ ಆದಾಯ ಪಡೆಯುತ್ತಿರುವುದು. ಅಡಿಕೆ ಬೆಲೆಗಳಲ್ಲಿ ಏರಿಳಿತಗಳಿದ್ದರೂ, ಇತರ ಅನೇಕ ಬೆಳೆಗಳಿಗಿಂತ ಉತ್ತಮ ಆದಾಯ ನೀಡುತ್ತಿರುವುದು. ಇದರಿಂದ ಆಸೆಗೆ ಬಿದ್ದ ಬಯಲುಸೀಮೆಯಾದ ಚಿತ್ರದುರ್ಗ ಜಿಲ್ಲೆ ಕೂಡ ಈಗ ಅಡಿಕೆ ಬೆಳೆಯತ್ತ ವಾಲಿದೆ. ಈ ಭಾಗದ ರೈತರು ಪ್ರತಿ ಐದು ವರ್ಷಕ್ಕೊಮ್ಮೆ ಬೆಳೆ ಬದಲಾಯಿಸುತ್ತಾರೆ. ಮೊದಲು ನೆಲಗಡಲೆ ಬೆಳೆಯುತ್ತಿದ್ದವರು ನಂತರ ಸೂರ್ಯಕಾಂತಿ, ಈರುಳ್ಳಿ, ಶುಂಠಿ, ಮೆಕ್ಕೆಜೋಳ ಬೆಳೆಯಲಾರಂಭಿಸಿದರು. ಈಗ ಅದೆಲ್ಲವನ್ನು ಬಿಟ್ಟು ಅಡಿಕೆ ತೋಟ ಮಾಡುತ್ತಿದ್ದಾರೆ.

ಸಮಸ್ಯೆ ಎಂದರೆ, ಅಡಿಕೆ ವರ್ಷಪೂರ್ತಿ ನೀರು ಬೇಡುವ ಬೆಳೆ. ರಾಜ್ಯದಲ್ಲಿ ಅಂತರ್ಜಲ ಕುಸಿತ ಕಾಣುತ್ತಿದೆ. ನೀರಿನ ನಿರ್ವಹಣೆ ಪ್ರಮುಖ ಸವಾಲಾಗಿ ಪರಿಣಮಿಸಿದೆ. ಇದೇ ಸಂದರ್ಭದಲ್ಲಿ ಮುಂಗಾರು ಕೈ ಕೊಟ್ಟಿದೆ. ಕರಾವಳಿ, ಮಲೆನಾಡು ಭಾಗದಲ್ಲೂ ನೀರಿನ ಕೊರತೆ ಕಾಡುತ್ತಿದೆ. 4ರಿಂದ 8 ಸಾವಿರ ಲೀಟರ್ ಟ್ಯಾಂಕರ್ ನೀರಿಗೆ 7 ಸಾವಿರ ರೂಪಾಯಿ ಕೊಟ್ಟರೂ ನೀರು ಸಿಗದಾಗಿದೆ. ಜೊತೆಗೆ ಎಲೆ ಚುಕ್ಕೆ ರೋಗ, ಹಳದಿ ಎಲೆ ರೋಗ ಬಾಧಿಸುತ್ತದೆ. ನಿಯಂತ್ರಣಕ್ಕೆ ದುಬಾರಿ ಬೆಲೆಯ ರಾಸಾಯನಿಕ ಔಷಧಿಗಳನ್ನು ಸಿಂಪಡಿಸಬೇಕಾಗಿದೆ. ಸಾಮಾನ್ಯವಾಗಿ ಉತ್ಪಾದನಾ ವೆಚ್ಚ, ಕೂಲಿ, ನೀರಾವರಿ, ಗೊಬ್ಬರ ಮತ್ತು ನಿರ್ವಹಣೆ ಸೇರಿ ಅಡಿಕೆ ಬೆಳೆ ವೆಚ್ಚ ನಿರಂತರವಾಗಿ ಏರುತ್ತಿದೆ. ಕೃಷಿ ತಜ್ಞರು ಮತ್ತು ಸಾಂಪ್ರದಾಯಿಕ ಅಡಿಕೆ ರೈತರ ಅಂದಾಜಿನ ಪ್ರಕಾರ, ಕ್ವಿಂಟಾಲ್ ಅಡಿಕೆಗೆ 45ರಿಂದ 50 ಸಾವಿರ ಮೇಲ್ಪಟ್ಟು ದರ ದೊರೆತರೆ ಅದು ಲಾಭ. 35 ಸಾವಿರಕ್ಕಿಂತ ಕೆಳಗೆ ಇಳಿದರೆ ಸಣ್ಣ ಮತ್ತು ಮಧ್ಯಮ ರೈತರು ನಷ್ಟಕ್ಕೊಳಗಾಗಿ ಸಮಸ್ಯೆಗೆ ಸಿಲುಕುತ್ತಾರೆ. ಆತ್ಮಹತ್ಯೆಗಳು ಹೆಚ್ಚಾಗುವ ಸಾಧ್ಯತೆ ಇದೆ.

ಅಡಿಕೆ ಬೆಳೆಗಾರರು ಈಗಾಗಲೇ ಒತ್ತಡ ಮತ್ತು ಆತಂಕದಲ್ಲಿದ್ದಾರೆ. ಮುಂಗಾರು ಕೈ ಕೊಟ್ಟಿರುವುದರಿಂದ ನೀರಿನ ಕೊರತೆ ಕಾಡುತ್ತಿದೆ. ಜೊತೆಗೆ ಅಗ್ಗದ ವಿದೇಶಿ ಅಡಿಕೆ ದೇಶದ ಮಾರುಕಟ್ಟೆಯನ್ನು ಆಕ್ರಮಿಸಿಕೊಳ್ಳುತ್ತಿದೆ. ಇದೇ ಸಂದರ್ಭದಲ್ಲಿ ಬಹಳ ದೊಡ್ಡ ಪ್ರಮಾಣದಲ್ಲಿ ಗುಜರಾತಿಗೆ ರವಾನೆಯಾಗುತ್ತಿದ್ದ ಕರ್ನಾಟಕದ ಅಡಿಕೆ, ಈ ಬಾರಿ ಸಾಗಣೆ ಸಮಸ್ಯೆಗೆ ಸಿಲುಕಿದೆ. ಕಳೆದ ಒಂದು ವಾರದಿಂದ ಅಡಿಕೆ ಲಾರಿಗಳು ಜಪ್ತಿಯ ನೆಪದಲ್ಲಿ ಮಹಾರಾಷ್ಟ್ರದ ಗಡಿಯಲ್ಲಿ ಕೊಳೆಯುತ್ತ ನಿಂತಿವೆ. ಇದರಿಂದ ಅಡಿಕೆ ದರ ಕುಸಿಯುವ ಭೀತಿ ಶುರುವಾಗಿದೆ. ಈ ನೆಪದಲ್ಲಿ ಶಿವಮೊಗ್ಗದಲ್ಲಿ ಅಡಿಕೆ ಬೆಳೆಗಾರರ ಸಭೆಯೂ ಜರುಗಿದೆ.

ಕರ್ನಾಟಕದಲ್ಲಿ ಅಡಿಕೆ ಬೆಳೆ ಆರ್ಥಿಕವಾಗಿ ಬಲಿಷ್ಠ ಸ್ಥಿತಿಯಲ್ಲಿರಬಹುದು. ಆದರೆ, ನೀರಿನ ಲಭ್ಯತೆ, ರೋಗಬಾಧೆ, ಬೆಲೆಗಳ ಅನಿಶ್ಚಿತತೆಯನ್ನು ಅಲಕ್ಷಿಸುವಂತಿಲ್ಲ. ಹಾಗೆಯೇ ಕೃಷಿಕರು ವಾಣಿಜ್ಯ ಬೆಳೆಗಳತ್ತ ಒಲವು ಹೊಂದುವುದು, ಆಹಾರ ಬೆಳೆಗಳ ಕುಸಿತದಂತಹ ದೀರ್ಘಕಾಲೀನ ಸವಾಲು ಎದುರಾಗುವುದನ್ನು ನಿರ್ಲಕ್ಷಿಸುವಂತಿಲ್ಲ. ಬೆಲೆ ಏರಿಕೆಯಿಂದ ಆಗುವ ಅನಾಹುತವನ್ನು, ಅಧ್ವಾನವನ್ನು ಅಂದಾಜು ಮಾಡಲಾಗುವುದಿಲ್ಲ.

ಈಗಲಾದರೂ ಮುಂದಿನ ದಿನಗಳಲ್ಲಿ ಏನು ಮಾಡಬೇಕು ಎನ್ನುವುದರ ಕುರಿತು ಸರ್ಕಾರ, ಕೃಷಿ-ತೋಟಗಾರಿಕೆ ಇಲಾಖೆ, ಕೃಷಿಕರು ಕಲೆತು ಕಾರ್ಯಯೋಜನೆ ರೂಪಿಸುವುದರ ಕಡೆ ಗಮನ ಹರಿಸಬೇಕಾಗಿದೆ.

ಬಂಗಾಳ ರಾಜಕಾರಣದ ಮಹಾ ಕುಸಿತ: ಅಭಿಷೇಕ್ ಬ್ಯಾನರ್ಜಿ ಪತನಕ್ಕೆ ಕಾರಣವೇನು?

ಪಶ್ಚಿಮ ಬಂಗಾಳದ ರಾಜಕೀಯ ಇತಿಹಾಸದಲ್ಲಿ 2026ರ ಏಪ್ರಿಲ್-ಮೇನಲ್ಲಿ ನಡೆದ ವಿಧಾನಸಭಾ ಚುನಾವಣೆಯು ಅತ್ಯಂತ ಆಘಾತಕಾರಿ ತಿರುವುಗಳನ್ನು ತಂದೊಡ್ಡಿದೆ. ಮಮತಾ ಬ್ಯಾನರ್ಜಿ ನೇತೃತ್ವದಲ್ಲಿ ಕಳೆದ ಹದಿನೈದು ವರ್ಷಗಳಿಂದ ಅಜೇಯ ಶಕ್ತಿಯಾಗಿ ಮೆರೆದಿದ್ದ ಟಿಎಂಸಿ ಸಾಮ್ರಾಜ್ಯವು ಪತನಗೊಂಡಿದ್ದು ಮಾತ್ರವಲ್ಲ, ಧೂಳೀಪಟವಾಗಿದೆ. ತಂತ್ರ-ಕುತಂತ್ರಗಳ ಮೂಲಕ 207 ಸ್ಥಾನಗಳನ್ನು ಗೆದ್ದಿರುವ ಬಿಜೆಪಿ, ಮೊದಲ ಬಾರಿಗೆ ಬಂಗಾಳದ ಅಧಿಕಾರ ಚುಕ್ಕಾಣಿ ಹಿಡಿದಿದೆ. ಸರ್ವಾಧಿಕಾರಿ ಧೋರಣೆಯಲ್ಲಿ ಆಡಳಿತ ಆರಂಭಿಸಿದೆ. ಬಿಜೆಪಿಯ ಕೋಮು ರಾಜಕಾರಣವನ್ನು ಬಲವಾಗಿ ಪ್ರತಿರೋಧಿಸಲೂ ಸಾಧ್ಯವಾಗದ ಪರಿಸ್ಥಿತಿಗೆ ಟಿಎಂಸಿ ಕುಸಿದಿದೆ. ಈ ಮಹಾ ಕುಸಿತದ ಬೆನ್ನಲ್ಲೇ, ಪಕ್ಷದೊಳಗೆ ಬಂಗಾಳದ ಕಾವು ಹೆಚ್ಚಾಗಿದೆ. ಟಿಎಂಸಿಯ ಹೆಚ್ಚಿನ ಶಾಸಕರು-ಸಂಸದರು ಪ್ರತ್ಯೇಕ ಬಣ ಕಟ್ಟಿಕೊಂಡು, ತಾವು ಅಧಿಕೃತವೆಂದು ಹೇಳಿಕೊಂಡಿದ್ದಾರೆ. ತಮ್ಮದೇ ಹೊಸ ಅಧ್ಯಕ್ಷರನ್ನು ನೇಮಿನಿಸಿಕೊಂಡಿದ್ದಾರೆ. ಸದ್ಯ, ಟಿಎಂಸಿಯೊಳಗಿನ ತೀವ್ರ ಕೋಲಾಹಲದ ಕೇಂದ್ರವಾಗಿ ಅಭಿಷೇಕ್ ಬ್ಯಾನರ್ಜಿ ಅವರತ್ತ ಬೊಟ್ಟು ಮಾಡಲಾಗುತ್ತಿದೆ.

ಟಿಎಂಸಿಯಲ್ಲಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹುದ್ದೆಯಲ್ಲಿದ್ದ ಅಭಿಷೇಕ್ ಅವರನ್ನು ಪಕ್ಷದ ಕಾರ್ಯಕರ್ತರು ಮತ್ತು ನಾಯಕರು ಯುವರಾಜ ಸೇನಾಪತಿ ಎಂದೇ ಕೊಂಡಾಡುತ್ತಿದ್ದರು. ಮಮತಾ ಅವರ ರಾಜಕೀಯ ಉತ್ತರಾಧಿಕಾರಿ ಎಂದೂ ಅಭಿಷೇಕ್ ಬ್ಯಾನರ್ಜಿ ಬಿಂಬಿತವಾಗಿದ್ದರು. ಆದರೆ, ಈಗ ಅವರ ರಾಜಕೀಯವು ಹಠಾತ್ ಪತನ ಕಂಡಿದೆ. ಇದಕ್ಕೆ ಕೇವಲ ಚುನಾವಣೆಯ ಸೋಲು ಮಾತ್ರ ಕಾರಣವಲ್ಲ. ಬದಲಿಗೆ, ಅವರ ಅತಿಯಾದ ಆತ್ಮವಿಶ್ವಾಸ, ಅಧಿಕಾರದ ಕೇಂದ್ರೀಕರಣ, ಹಿರಿಯ ನಾಯಕರ ಕಡೆಗಣನೆ ಹಾಗೂ ಸರಣಿ ಭ್ರಷ್ಟಾಚಾರದ ಆರೋಪಗಳು ಪ್ರಮುಖ ಕಾರಣಗಳಾಗಿವೆ.

ಚುನಾವಣಾ ಸೋಲು, ಆಡಳಿತ ವಿರೋಧಿ ಅಲೆ ಹಾಗೂ ಡೈಮಂಡ್ ಹಾರ್ಬರ್ ಮಾಡಲ್ ವೈಫಲ್ಯ

ಟಿಎಂಸಿ ಸತತ 15 ವರ್ಷಗಳ ಕಾಲ ಆಡಳಿತ ನಡೆಸಿದ್ದರಿಂದ ಸಹಜವಾಗಿಯೇ ತಳಮಟ್ಟದಲ್ಲಿ ತೀವ್ರ ಆಡಳಿತ ವಿರೋಧಿ ಅಲೆ ಸೃಷ್ಟಿಯಾಗಿತ್ತು. ಜನರಲ್ಲಿದ್ದ ಈ ಅಸಮಾಧಾನವನ್ನು ಸರಿಯಾಗಿ ಗ್ರಹಿಸುವಲ್ಲಿ ಅಭಿಷೇಕ್ ಬ್ಯಾನರ್ಜಿ ನೇತೃತ್ವದ ಚುನಾವಣಾ ತಂತ್ರಗಾರಿಕೆ ಸಂಪೂರ್ಣವಾಗಿ ವಿಫಲವಾಯಿತು. ಅಭಿಷೇಕ್ ಅವರು ಪಕ್ಷದೊಳಗೆ ತಾವೇ ಸ್ವತಂತ್ರವಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಿದ್ದರು. ಸ್ಥಳೀಯ ಸಮೀಕರಣಗಳನ್ನು ಮತ್ತು ಪ್ರಭಾವಿ ನಾಯಕರ ಅಭಿಪ್ರಾಯಗಳನ್ನು ಬದಿಗೊತ್ತಿ, ಕೇವಲ ತಮ್ಮ ಆಪ್ತ ವಲಯಕ್ಕೆ ಟಿಕೆಟ್ ಹಂಚಿಕೆ ಮಾಡಿದ್ದು ಇಡೀ ಪಕ್ಷಕ್ಕೆ ಮುಳುವಾಯಿತು.

ಅಭಿಷೇಕ್ ಬ್ಯಾನರ್ಜಿ ಅವರು ತಮ್ಮದೇ ಕ್ಷೇತ್ರವಾದ ಡೈಮಂಡ್ ಹಾರ್ಬರ್‌ನಲ್ಲಿ ಜಾರಿಗೆ ತಂದಿದ್ದ ಡೈಮಂಡ್ ಹಾರ್ಬರ್ ಮಾಡಲ್‌ಅನ್ನು ಇಡೀ ರಾಜ್ಯಕ್ಕೆ ಮಾದರಿ ಎಂದು ಪಕ್ಷದಾದ್ಯಂತ ಭಾರಿ ಪ್ರಚಾರ ಮಾಡಲಾಗಿತ್ತು. ತಳಮಟ್ಟದ ಪ್ರಚಾರ ಕಾರ್ಯವಿಧಾನ, ಕಾರ್ಪೊರೇಟ್ ಶೈಲಿಯ ಡಿಜಿಟಲ್ ಕ್ಯಾಂಪೇನ್ ಹಾಗೂ ತಂತ್ರಜ್ಞಾನ ಆಧಾರಿತ ನಿರ್ವಹಣೆಯನ್ನೊಳಗೊಂಡ ಈ ಮಾದರಿಯು ಕೇವಲ ಕಾಗದದ ಮೇಲಷ್ಟೇ ಸುಂದರವಾಗಿತ್ತು. ಆದರೆ, ನೆಲದಲ್ಲಿ ಪರಿಸ್ಥಿತಿ ಭಿನ್ನವಾಗಿತ್ತು. ಇದಕ್ಕೆ ಅತ್ಯಂತ ಸ್ಪಷ್ಟ ಉದಾಹರಣೆಯೆಂದರೆ, ಫಲ್ತಾ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಅಭಿಷೇಕ್ ಬ್ಯಾನರ್ಜಿ ಅವರ ಪರಮ ಆಪ್ತರಾಗಿದ್ದ ಟಿಎಂಸಿ ಅಭ್ಯರ್ಥಿ ಜಹಾಂಗೀರ್ ಖಾನ್ ಅವರು ಭೀಕರ ಸೋಲು ಕಂಡು ನಾಲ್ಕನೇ ಸ್ಥಾನಕ್ಕೆ ತಳ್ಳಲ್ಪಟ್ಟರು. ಈ ಬೆಳವಣಿಗೆಯು ಅಭಿಷೇಕ್ ಅವರ ರಾಜಕೀಯ ರಣತಂತ್ರದ ಬೆನ್ನೆಲುಬಾಗಿದ್ದ ಡೈಮಂಡ್ ಹಾರ್ಬರ್ ಮಾದರಿಯನ್ನು



ಸಂಪೂರ್ಣವಾಗಿ ಧ್ವಂಸಗೊಳಿಸಿತು.

ಹಿರಿಯ ನಾಯಕರ ಬಂಡಾಯ

ಅಭಿಷೇಕ್ ಬ್ಯಾನರ್ಜಿ ಅವರ ತ್ವರಿತ ರಾಜಕೀಯ ಏಳಿಗೆ ಮತ್ತು ಅವರ ದರ್ಪದ ನಾಯಕತ್ವ ಶೈಲಿಯು ಟಿಎಂಸಿಯ ಹಿರಿಯ ನಾಯಕರಲ್ಲಿ ದೀರ್ಘಕಾಲದಿಂದ ತೀವ್ರ ಅಸಮಾಧಾನವನ್ನು ಉಂಟುಮಾಡಿತ್ತು. ಮಮತಾ ಬ್ಯಾನರ್ಜಿ ಅವರೊಂದಿಗೆ ದಶಕಗಳಿಂದ ಹೋರಾಟ ಮಾಡಿಕೊಂಡು ಬಂದಿದ್ದ ಹಿರಿಯ ನಾಯಕರನ್ನು ಅಭಿಷೇಕ್ ನಡೆಸಿಕೊಂಡ ರೀತಿ ಮತ್ತು ಅವರಿಗೆ ಮಾಡಿದ ಮುಜುಗರಗಳು ಚುನಾವಣೆಯ ನಂತರ ಭಾರೀ ದಂಗೆಯಾಗಿ ಸ್ಫೋಟಗೊಂಡವು. ಪಕ್ಷದ ಒಟ್ಟು 28 ಲೋಕಸಭಾ ಸಂಸದರ ಪೈಕಿ 20ಕ್ಕೂ ಹೆಚ್ಚು ಸಂಸದರು ಮತ್ತು ಸುಮಾರು 60 ಕ್ಕೂ ಹೆಚ್ಚು ಶಾಸಕರು ಅಭಿಷೇಕ್ ವಿರುದ್ಧ ಬಹಿರಂಗವಾಗಿಯೇ ಬಂಡಾಯವೆದ್ದಿದ್ದರು. ಈ ಬಂಡಾಯಗಾರರು ಬಂಗಾಳ ಮೂಲದ ನ್ಯಾಷನಲಿಸ್ಟ್ ಸಿಟಿಜನ್ಸ್ ಪಾರ್ಟಿ ಆಫ್ ಇಂಡ್ಯಾ () ಎಂಬ ಪಕ್ಷದೊಂದಿಗೆ ವಿಲೀನಗೊಳ್ಳುವುದಾಗಿ ಘೋಷಿಸಿ, ಸಂಸತ್ತಿನಲ್ಲಿ ಪ್ರತ್ಯೇಕ ಬಣವಾಗಿ ಗುರುತಿಸುವಂತೆ ಸ್ಪೀಕರ್ ಓಂ ಬಿರ್ಲಾ ಅವರಿಗೆ ಮನವಿ ಸಲ್ಲಿಸಿದರು. ಇದು ಟಿಎಂಸಿಯ ಇತಿಹಾಸದಲ್ಲೇ ಅತ್ಯಂತ ದೊಡ್ಡ ಒಡಕಾಗಿದೆ.

ಆದಾಗ್ಯೂ, ಬಂಡಾಯಕ್ಕೆ ಅಭಿಷೇಕ್ ಬ್ಯಾನರ್ಜಿ ವಿರುದ್ಧದ ಅಸಮಾಧಾನಕ್ಕಿಂತಲೂ ಬಂಗಾಳದಲ್ಲಿ ಬಿಜೆಪಿಯ ಗೂಂಡಾ ಆಳ್ವಿಕೆಯ ಆರಂಭ ಮತ್ತು ಬೆದರಿಕೆಗಳೇ ಮುಖ್ಯ ಕಾರಣವೆಂದು ಆರೋಪಿಸಲಾಗಿದೆ.

ಅಧಿಕಾರದ ಕೇಂದ್ರೀಕರಣ, ನೆಪೋಟಿಸಂ ಮತ್ತು ಭ್ರಷ್ಟಾಚಾರದ ಕರಾಳ ನೆರಳು

ಅಭಿಷೇಕ್ ಬ್ಯಾನರ್ಜಿ ವಿರುದ್ಧ ಕೇಳಿಬಂದ ಮತ್ತೊಂದು ಪ್ರಮುಖ ಆರೋಪವೆಂದರೆ ಅತಿಯಾದ ಆಡಳಿತ ಕೇಂದ್ರೀಕರಣ. ಪಕ್ಷದ ಯಾವುದೇ ಹಿರಿಯ ನಾಯಕರಿಗಾಗಲಿ ಅಥವಾ ಕಾರ್ಯಕರ್ತರಿಗಾಗಲಿ ಅಭಿಷೇಕ್ ಸುಲಭವಾಗಿ ಸಿಗುತ್ತಿರಲಿಲ್ಲ. ಅವರ ಸುತ್ತಲೂ ಇದ್ದ ಐ-ಪ್ಯಾಕ್ ಸಂಸ್ಥೆಯ ಪ್ರತಿನಿಧಿಗಳು ಮತ್ತು ಕೆಲವು ಕಾರ್ಪೊರೇಟ್ ಶೈಲಿಯ ಆಪ್ತರ ಸಣ್ಣ ಗುಂಪು ಮಾತ್ರ ಇಡೀ ಪಕ್ಷದ ಪ್ರಮುಖ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿತ್ತು. ಇದು ಪಕ್ಷದ ಆಂತರಿಕ ಪ್ರಜಾಪ್ರಭುತ್ವವನ್ನು ಸಂಪೂರ್ಣವಾಗಿ ಹತ್ತಿಕ್ಕಿತು. ವಿರೋಧ ಪಕ್ಷಗಳು ಮತ್ತು ಸ್ವತಃ ಪಕ್ಷದ ಒಳಗಿನ ವಿಮರ್ಶಕರು ಅಭಿಷೇಕ್ ಅವರನ್ನು ಕೇವಲ ಮಮತಾ ಅವರ ನೆರಳಿನಲ್ಲಿ ಬೆಳೆದ ನೆಪೋ ಕಿಡ್ (ವಂಶಪಾರಂಪರ್ಯದ ಶಿಶು) ಎಂದು ಕರೆಯಲು ಪ್ರಾರಂಭಿಸಿದರು. ಇದು ಸಾರ್ವಜನಿಕ ವಲಯದಲ್ಲಿ ಅವರ ಇಮೇಜ್‌ಗೆ ಭಾರಿ ಹಾನಿ ಉಂಟುಮಾಡಿತು.

ಇದರೊಂದಿಗೆ, ಅಭಿಷೇಕ್ ಬ್ಯಾನರ್ಜಿ ದೀರ್ಘಕಾಲದಿಂದಲೂ ಕೇಂದ್ರ ತನಿಖಾ ಸಂಸ್ಥೆಗಳ ಕಣ್ಗಾವಲಿನಲ್ಲಿದ್ದರು. ಜಾರಿ ನಿರ್ದೇಶನಾಲಯ () ಮತ್ತು ಸಿಬಿಐನಂತಹ ತನಿಖಾ ಸಂಸ್ಥೆಗಳು ಬಂಗಾಳದ ಕಲ್ಲಿದ್ದಲು ಕಳ್ಳಸಾಗಣೆ, ದನಗಳ ಕಳ್ಳಸಾಗಣೆ ಹಾಗೂ ಶಿಕ್ಷಕರ ನೇಮಕಾತಿ ಹಗರಣಗಳಿಗೆ ಸಂಬಂಧಿಸಿದಂತೆ ಅಭಿಷೇಕ್ ಅವರನ್ನು ಸರಣಿ ವಿಚಾರಣೆಗಳಿಗೆ ಒಳಪಡಿಸಿದ್ದವು. ಚುನಾವಣೆಯ ಬೆನ್ನಲ್ಲೇ, ಅಭಿಷೇಕ್ ಬ್ಯಾನರ್ಜಿ ಅವರ ಪೋಷಕರು ಮತ್ತು ಅವರ ಒಡೆತನದ ಲೀಪ್ಸ್ ಅಂಡ್ ಬೌಂಡ್ಸ್ ಸಂಸ್ಥೆಗೆ ಸೇರಿದ 17 ಕಟ್ಟಡಗಳು ಅಕ್ರಮವಾಗಿ ನಿರ್ಮಾಣವಾಗಿವೆ ಎಂದು ಕೋಲ್ಕತ್ತಾ ಮುನ್ಸಿಪಲ್ ಕಾರ್ಪೊರೇಷನ್ ನೋಟಿಸ್ ಜಾರಿ ಮಾಡಿತು. ಅಷ್ಟೇ ಅಲ್ಲದೆ, ಅವರ ಪರಮ ಆಪ್ತ ಜಹಾಂಗೀರ್ ಖಾನ್ ವಿವಿಧ ಅಪರಾಧ ಆರೋಪಗಳ ಅಡಿಯಲ್ಲಿ ಬಂಧನಕ್ಕೊಳಗಾಗಿದ್ದು, ಅಭಿಷೇಕ್ ಸುತ್ತಲಿನ ಭ್ರಷ್ಟಾಚಾರದ ಜಾಲದ ಆರೋಪವನ್ನು ಸಾರ್ವಜನಿಕವಾಗಿ ಬಯಲು ಮಾಡಿತು.

ಬಿಜೆಪಿ ಕುತಂತ್ರ ಮತ್ತು ಸುವೇಂದು ಅಧಿಕಾರಿ ಪ್ರಭಾವ

ಟಿಎಂಸಿಯ ಈ ಆಂತರಿಕ ಬಿಕ್ಕಟ್ಟು ಮತ್ತು ಜನರ ಅಸಮಾಧಾನವನ್ನು ಬಿಜೆಪಿ ಅತ್ಯಂತ ಚಾಣಾಕ್ಷತನದಿಂದ ಬಳಸಿಕೊಂಡಿತು. 2021ರ ಚುನಾವಣೆಯ ಸೋಲಿನ ನಂತರ ಬಿಜೆಪಿ ತನ್ನ ಸಾಂಪ್ರದಾಯಿಕ ಶೈಲಿಯನ್ನು ಬದಲಾಯಿಸಿ, ಟಿಎಂಸಿಯ ಸ್ಥಳೀಯ ನಾಯಕರ ಅಸಮಾಧಾನವನ್ನೇ ತನ್ನ ಪ್ರಮುಖ ಅಸ್ತ್ರವನ್ನಾಗಿಸಿಕೊಂಡಿತು. ಒಂದು ಕಾಲದಲ್ಲಿ ಮಮತಾರ ಬಲಗೈ ಭಂಟನಾಗಿದ್ದ ಹಿಂದಿನ ವಿಪಕ್ಷ ನಾಯಕ, ಹಾಲಿ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರು ಅಭಿಷೇಕ್ ಅವರೊಂದಿಗಿನ ಹಳೆಯ ರಾಜಕೀಯ ವೈರತ್ವವನ್ನು ಮುಂದುವರಿಸಿದರು. ಚುನಾವಣಾ ಪ್ರಚಾರದ ಅವಧಿಯಲ್ಲಿ ಅಭಿಷೇಕ್ ಮಾಡಿದ್ದ ಕೆಲವು ಪ್ರಚೋದನಾಕಾರಿ ಭಾಷಣಗಳ ವಿರುದ್ಧ ಪೊಲೀಸ್ ಪ್ರಕರಣಗಳನ್ನು ದಾಖಲಿಸಿ, ಸಿಐಡಿ ತನಿಖೆಗೆ ಒಪ್ಪಿಸುವ ಮೂಲಕ ಅಭಿಷೇಕ್ ಅವರನ್ನು ಸಂಪೂರ್ಣವಾಗಿ ರಕ್ಷಣಾತ್ಮಕ ಆಟಕ್ಕೆ ತಳ್ಳುವಲ್ಲಿ ಬಿಜೆಪಿ ಯಶಸ್ವಿಯಾಯಿತು.

ಇದೆಲ್ಲವೂ ಚುನಾವಣಾ ಅಖಾಡ ಬದಿಯಲ್ಲಿ ನಡೆಯುತ್ತಿದ್ದ ಆಟಗಳಾಗಿದ್ದವು. ಇವುಗಳ ಅಭಿಷೇಕ್ ಬ್ಯಾನರ್ಜಿ ಅವರ ವರ್ಚಸ್ಸಿನ ಪತನಕ್ಕೆ ಕಾರಣವಾಗಿದ್ದರೂ, ಚುನಾವಣಾ ಸೋಲಿಗೆ ಇವಷ್ಟೇ ಕಾರಣವಾಗಿರಲಿಲ್ಲ. ಯಾಕೆಂದರೆ, ಇವುಗಳೆಲ್ಲದರ ನಡುವೆ, ಅಖಾಡ ಮುಖ್ಯವೇದಿಕೆಯಲ್ಲಿ ಬಿಜೆಪಿಯು ಬಂಗಾಳಿಗರ ಮತಗಳನ್ನು ಲೂಟಿ ಮಾಡುವ ಸಂಚನ್ನು ಯಶಸ್ವಿಯಾಗಿ ಅನುಷ್ಠಾನಕ್ಕೆ ತಂದಿತು. ಮೋದಿ ನೇತೃತ್ವದ ಕೇಂದ್ರ ಸರ್ಕಾರವು ತನ್ನ ಕೈಗೊಂಬೆಯಾಗಿರುವ ಚುನಾವಣಾ ಆಯೋಗವನ್ನು ಬಳಸಿಕೊಂಡು ಎಸ್‌ಐಆರ್‌ಅನ್ನು ಬಂಗಾಳದಲ್ಲಿ ಹೇರಿತು. ಲಾಜಿಕಲ್ ಡಿಸ್ಕ್ರಿಪ್ಸಿಯನ್ಸಿ ಎಂಬ ಹೊಸ ತಂತ್ರಜ್ಞಾನವನ್ನು ಸೇರಿಸಿ, 90 ಲಕ್ಷ ಮತದಾರರನ್ನು ಮತಪಟ್ಟಿಯಿಂದ ಹೊರಹಾಕಿತು. ಅವರಲ್ಲಿ, 27 ಲಕ್ಷ ಮಂದಿ ಆಕ್ಷೇಪಣಾ ಅರ್ಜಿ ಸಲ್ಲಿಸಿದ್ದರೂ, ಅವರ ಬಳಿ ಅಗತ್ಯ ದಾಖಲೆಗಳಿದ್ದರೂ ಅವರು ಕಳೆದ ಚುನಾವಣೆಯಲ್ಲಿ ಮತಚಲಾಯಿಸಲು ಅವಕಾಶ ನೀಡಲಿಲ್ಲ.

ಬರೋಬ್ಬರಿ ಸುಮಾರು 1 ಕೋಟಿ ಮತದಾರರನ್ನು ಚುನಾವಣಾ ಪ್ರಕ್ರಿಯೆಯಿಂದ ಹೊರಗಿಟ್ಟು ನಡೆದ ಚುನಾವಣೆಯಲ್ಲಿ ಬಿಜೆಪಿ ಬೃಹತ್ ಗೆಲುವು ದಾಖಲಿಸಿತು. ಎಸ್‌ಐಆರ್ ವಿರುದ್ಧ ಮಮತಾ ಬ್ಯಾನರ್ಜಿ ಭಾರೀ ಪ್ರತಿಭಟನೆಗಳನ್ನು ನಡೆಸಿದರೂ, ಚುನಾವಣೆಯಲ್ಲಿ ಗೆಲ್ಲಲಾಗದೆ, ಅಧಿಕಾರ ಕಳೆದುಕೊಂಡರು. ರಾಜಕೀಯ ನೆಲದಲ್ಲಿ ತೀವ್ರ ಕುಸಿತ ಕಂಡರು.

ಪ್ರಸ್ತುತ ಸ್ಥಿತಿ ಮತ್ತು ಕಾಂಗ್ರೆಸ್ ಕಡೆಗೆ ಒಲವು

ಪ್ರಸ್ತುತ ಪರಿಸ್ಥಿತಿಯನ್ನು ಗಮನಿಸಿದರೆ ಟಿಎಂಸಿ ತನ್ನ ಅಸ್ತಿತ್ವದ ಭಾರಿ ಬಿಕ್ಕಟ್ಟನ್ನು ಎದುರಿಸುತ್ತಿದೆ. ರಿತಬ್ರತ ಬ್ಯಾನರ್ಜಿ ನೇತೃತ್ವದ ದಂಗೆಕೋರ ಶಾಸಕರು ಮತ್ತು ಸಂಸದರ ಗುಂಪು ಮಮತಾ ಬ್ಯಾನರ್ಜಿ ಅವರನ್ನು ಪಕ್ಷದ ಅಧ್ಯಕ್ಷ ಸ್ಥಾನದಿಂದ ಮುಕ್ತಗೊಳಿಸಿದೆ. ರಿತಬ್ರತ ಅವರನ್ನೇ ತಮ್ಮ ಹೊಸ ಅಧ್ಯಕ್ಷರನ್ನಾಗಿ ಘೋಷಿಸಿಕೊಂಡಿದೆ. ಅಲ್ಲದೆ, ಅಭಿಷೇಕ್ ಬ್ಯಾನರ್ಜಿ ಅವರನ್ನು ಪಕ್ಷದಿಂದ ಅಮಾನತು ಮಾಡಿರುವುದಾಗಿ ಹಕ್ಕು ಮಂಡಿಸಿದೆ.

ಮುಳುಗುತ್ತಿರುವ ಹಡಗಿನಂತಾಗಿರುವ ಟಿಎಂಸಿಯನ್ನು ಉಳಿಸಿಕೊಳ್ಳಲು ಜೂನ್ 8 ರಂದು ದೆಹಲಿಯಲ್ಲಿ ನಡೆದ ವಿರೋಧ ಪಕ್ಷಗಳ ಇಂಡಿಯಾ ಮೈತ್ರಿಕೂಟದ ಸಭೆಯ ಸಂದರ್ಭದಲ್ಲಿ ಮಮತಾ ಬ್ಯಾನರ್ಜಿ ಅವರು ಸೋನಿಯಾ ಗಾಂಧಿ ಅವರನ್ನು ಮತ್ತು ಅಭಿಷೇಕ್ ಬ್ಯಾನರ್ಜಿ ಅವರು ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿದ್ದಾರೆ. ಈ ಸಭೆಯು ಮುಂಬರುವ ದಿನಗಳಲ್ಲಿ ಟಿಎಂಸಿಯನ್ನು ಅದರ ಮೂಲ ಪಕ್ಷವಾದ ಕಾಂಗ್ರೆಸ್‌ನೊಂದಿಗೆ ಸಂಪೂರ್ಣವಾಗಿ ವಿಲೀನಗೊಳಿಸುವ ಮುನ್ಸೂಚನೆಯಾಗಿದೆ ಎಂಬ ಚರ್ಚೆಗಳು ರಾಜಕೀಯ ವಲಯದಲ್ಲಿ ಜೋರಾಗಿವೆ.

ಜಗತ್ತೇ ಸಂಭ್ರಮಿಸುವ ಫಿಫಾ ವಿಶ್ವಕಪ್: ಭಾರತದ ತಂಡ ಯಾಕೆ ಆಡುತ್ತಿಲ್ಲ?

ಒಂದು ಕಾಲದಲ್ಲಿ ಜಾಗತಿಕ ಮಟ್ಟದಲ್ಲಿ, ಅದರಲ್ಲೂ ಒಲಿಂಪಿಕ್ಸ್ ನಲ್ಲಿ ಭಾರತದ ಫುಟ್‌ಬಾಲ್ ತಂಡ ಅದ್ಭುತ ಸಾಧನೆ ಮಾಡಿತ್ತು. 1948ರ ಲಂಡನ್ ಒಲಿಂಪಿಕ್ಸ್ ಮತ್ತು 1956ರ ಮೆಲ್ಬೋರ್ನ್ ಒಲಿಂಪಿಕ್ಸ್ ನಲ್ಲಿ ಬಲಿಷ್ಠ ತಂಡಗಳಿಗೆ ನಡುಕ ಹುಟ್ಟಿಸಿದ್ದ ಭಾರತ, 1956ರಲ್ಲಿ ಸೆಮಿಫೈನಲ್ ಪ್ರವೇಶಿಸಿ ಐತಿಹಾಸಿಕ ನಾಲ್ಕನೇ ಸ್ಥಾನ ಪಡೆದಿತ್ತು. 140 ಕೋಟಿ ಜನರ ಭಾರತ ಫಿಫಾ ವಿಶ್ವಕಪ್ ಆಡಬೇಕಾದರೆ ಕೇವಲ ಒಣ ಭಾಷಣ, ಭಾವನಾತ್ಮಕ ನಿರ್ಧಾರಗಳು ಅಥವಾ ಹೆಸರು ಬದಲಾವಣೆಯ ಕಸರತ್ತುಗಳು ಸಾಲದು. ಕಠಿಣ ದೈಹಿಕ ಶ್ರಮ ಬೇಡುವ ಈ ಜಾಗತಿಕ ಕ್ರೀಡೆಯ ಮಹತ್ವವನ್ನು ಅರಿತು, ಸರ್ಕಾರದ ಸ್ಪಷ್ಟವಾದ ಕ್ರೀಡಾ ನೀತಿ, ಭ್ರಷ್ಟಾಚಾರ ರಹಿತ ಪ್ರಾಮಾಣಿಕ ಆಡಳಿತ ಹಾಗೂ ತಳಮಟ್ಟದ ಮೂಲಸೌಕರ್ಯಗಳ ಮೇಲೆ ಬೃಹತ್ ಆರ್ಥಿಕ ಹೂಡಿಕೆ ಅತ್ಯಗತ್ಯ

ಇತ್ತೀಚೆಗಷ್ಟೇ ರಾಷ್ಟ್ರೀಯ ಫುಟ್‌ಬಾಲ್ ಸಂಸ್ಥೆಯ () ಹೆಸರಿನಲ್ಲಿದ್ದ ಇಂಡಿಯನ್ (-) ಪದವನ್ನು ತೆಗೆದುಹಾಕಿ ಭಾರತೀಯ () ಎಂದು ಬದಲಾಯಿಸುವ ವಿಚಾರ ಮುನ್ನೆಲೆಗೆ ಬಂದಾಗ ಕ್ರೀಡಾ ವಲಯದಲ್ಲಿ ವ್ಯಾಪಕ ಆಕ್ರೋಶ ವ್ಯಕ್ತವಾಗಿತ್ತು. ಇಂತಹ ರಾಜಕೀಯ ದುರುದ್ದೇಶದ ಬದಲಾವಣೆಗಳಿಂದ ಕ್ರೀಡೆಯ ಗುಣಮಟ್ಟ ಸುಧಾರಿಸುವುದಿಲ್ಲ ಎನ್ನುವುದು ವಾಸ್ತವ. ಫುಟ್‌ಬಾಲ್ ಕ್ರೀಡೆಗೆ ಇಂದು ತುರ್ತಾಗಿ ಬೇಕಾಗಿರುವುದು ಕೇವಲ ಹೆಸರು ಬದಲಾವಣೆಯಲ್ಲ; ಬದಲಾಗಿ ಹೆಚ್ಚಿನ ಆರ್ಥಿಕ ಪ್ರೋತ್ಸಾಹ, ವ್ಯಾಪಕ ಪ್ರಚಾರ ಮತ್ತು ಮುಖ್ಯವಾಗಿ ಗ್ರಾಮೀಣ ಭಾಗಗಳಲ್ಲಿ ಕ್ರೀಡೆಯನ್ನು ಉತ್ತೇಜಿಸುವ ಬದ್ಧತೆ. ಆಟಗಾರರಿಗೆ ಬೇಕಾದ ಮೈದಾನ ಹಾಗೂ ಉತ್ತಮ ತರಬೇತಿಯಂತಹ ಸೌಲಭ್ಯಗಳನ್ನು ಒದಗಿಸದೆ, ಕೇವಲ ಹೆಸರು ಬದಲಿಸುವಂತಹ ವಿಚಾರಗಳಿಗೆ ಅಂಟಿಕೊಂಡರೆ ವಿಶ್ವಮಟ್ಟದಲ್ಲಿ ನಾವು ಯಾವುದೇ ಸಾಧನೆ ಮಾಡಲು ಸಾಧ್ಯವಿಲ್ಲ

ಜಗತ್ತಿನ ಅತಿ ಹೆಚ್ಚು ಜನಸಂಖ್ಯೆ, ಅಂದರೆ ಸುಮಾರು 140 ಕೋಟಿ ಜನರಿರುವ ನಮ್ಮ ದೇಶ, ವಿಶ್ವದ ಅತಿ ದೊಡ್ಡ ಕ್ರೀಡಾ ಹಬ್ಬವಾದ ಫಿಫಾ () ವಿಶ್ವಕಪ್‌ನಲ್ಲಿ ಆಡುವ ಅವಕಾಶವನ್ನು ಇದುವರೆಗೂ ಪಡೆದಿಲ್ಲ ಎಂಬುದು ವ್ಯವಸ್ಥೆಯ ಬಹುದೊಡ್ಡ ವಿಪರ್ಯಾಸ. ಜಗತ್ತಿನ ಎಷ್ಟೋ ಸಣ್ಣಪುಟ್ಟ ರಾಷ್ಟ್ರಗಳು ಫಿಫಾ ವಿಶ್ವಕಪ್‌ಗೆ ನಿಯಮಿತವಾಗಿ ಅರ್ಹತೆ ಪಡೆಯುತ್ತಿರುವಾಗ, ನಾವಿನ್ನೂ ವಿಶ್ವ ಯ್ಯಾಂಕಿಂಗ್‌ನಲ್ಲಿ 138ರಲ್ಲಿದೆ. ಇಷ್ಟು ದೊಡ್ಡ ಜನಸಂಖ್ಯೆಯಲ್ಲಿ ವಿಶ್ವದರ್ಜೆಯ ಕೇವಲ 11 ಮಂದಿ ಆಟಗಾರರನ್ನು ಹೆಕ್ಕಿ ತೆಗೆಯಲು ನಮಗೆ ಸಾಧ್ಯವಾಗುತ್ತಿಲ್ಲ ಎಂದರೆ, ನಮ್ಮ ಕ್ರೀಡಾ ನೀತಿಗಳು ಮತ್ತು ಆಡಳಿತ ವ್ಯವಸ್ಥೆ ಎಲ್ಲಿ ಎಡವುತ್ತಿವೆ ಎಂಬುದನ್ನು ಗಂಭೀರವಾಗಿ ಪ್ರಶ್ನಿಸಿಕೊಳ್ಳಬೇಕಿದೆ.

ಭಾರತದಲ್ಲಿ ಫುಟ್‌ಬಾಲ್ ಕ್ರೀಡೆಯು ಇಡೀ ದೇಶವನ್ನು ವ್ಯಾಪಿಸಿದ ಕ್ರೀಡೆಯಾಗಿ ಬೆಳೆದಿಲ್ಲ ಎಂಬುದು ಮತ್ತೊಂದು ಕಟುಸತ್ಯ. ಪ್ರಸ್ತುತ ಫುಟ್‌ಬಾಲ್ ಕೇವಲ ಪಶ್ಚಿಮ ಬಂಗಾಳ, ಕೇರಳ, ತಮಿಳುನಾಡು ಹಾಗೂ ಈಶಾನ್ಯದ ಬೆರಳೆಣಿಕೆಯ ಕೆಲವು ರಾಜ್ಯಗಳಲ್ಲಿ ಮಾತ್ರ ತಕ್ಕಮಟ್ಟಿಗೆ ಜನಪ್ರಿಯತೆ ಉಳಿಸಿಕೊಂಡಿದೆ. ಈ ಕೆಲವೇ ರಾಜ್ಯಗಳನ್ನು ಹೊರತುಪಡಿಸಿದರೆ, ದೇಶದ ಬಹುಪಾಲು ರಾಜ್ಯಗಳಲ್ಲಿ ಈ ಆಟ ಕೇವಲ ಹೆಸರಿಗಷ್ಟೇ ಸೀಮಿತವಾಗಿದೆ. ಕ್ರಿಕೆಟ್‌ಗೆ ಸಿಗುವ ಅದ್ಭುತ ಮನ್ನಣೆ, ಜನಬೆಂಬಲ ಮತ್ತು ಪ್ರಾಯೋಜಕತ್ವ ಫುಟ್‌ಬಾಲ್‌ಗೆ ಲಭ್ಯವಾಗದಿರುವುದು ಈ ಕ್ರೀಡೆ ದೇಶಾದ್ಯಂತ ಸಮಾನವಾಗಿ ಬೆಳೆಯದೆ ಸೊರಗಲು ಪ್ರಮುಖ ಕಾರಣವಾಗಿದೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಮಾತ್ರವಲ್ಲದೆ, ಬೃಹತ್ ಕಾರ್ಪೊರೇಟ್ ಪ್ರಾಯೋಜಕರು ಸಹ ಕೇವಲ ಕ್ರಿಕೆಟ್‌ನತ್ತ ಮಾತ್ರ ತಮ್ಮ ಸಂಪೂರ್ಣ ಒಲವು ತೋರುತ್ತಿರುವುದು ವಿಪರ್ಯಾಸ. ವಿದೇಶದ ಸ್ಟಾರ್‌ಗಳಾದ ಲಿಯೊನೆಲ್ ಮೆಸ್ಸಿ ,ಪೆಲೆ,ಡಿಯೆಗೊ ಮರಾಡೋನಾ,ಡೇವಿಡ್ ಬೆಕ್ಹಾಮ್ ಅವರುಗಳು ತಮ್ಮ ತಮ್ಮ ರಾಜ್ಯಗಳಿಗೆ ಆಹ್ವಾನಿಸಲು ತಿಂಗಳುಗಟ್ಟಲೇ ಪೂರ್ವಾನುಮತಿ ಪಡೆಯುವ ರಾಜ್ಯ ಸರ್ಕಾರಗಳು ಹಾಗೂ ಮುಖ್ಯಮಂತ್ರಿಗಳು, ಅಲ್ಲದೆ ಪ್ರಾಯೋಜಕರು ಇಂದಿಗೂ ಇಮ್ಮ ದೇಶದಲ್ಲಿ ಒಂದು ರೀತಿಯ ಕೀಳರಿಮೆಯಿಂದ ಕಾಣುತ್ತಾರೆ. ಆದರೆ ಜಾಗತಿಕ ವಾಸ್ತವವೇ ಬೇರೆ; ವಿಶ್ವದಾದ್ಯಂತ ಅತಿ ಹೆಚ್ಚು ದೇಶಗಳಲ್ಲಿ ಆಡಲ್ಪಡುವ, ಅತಿ ಹೆಚ್ಚು ಜನರಿಂದ ಆರಾಧಿಸಲ್ಪಡುವ ಹಾಗೂ ಅತ್ಯಧಿಕ ವರಮಾನ ತಂದುಕೊಡುವ ವಿಶ್ವದ ನಂಬರ್ ಒನ್ ಕ್ರೀಡೆ ಫುಟ್‌ಬಾಲ್. ಅಷ್ಟೇ ಅಲ್ಲದೆ, ಬೇರೆಲ್ಲಾ ಕ್ರೀಡೆಗಳಿಗಿಂತ ಇದು ಅತ್ಯಂತ ಕಠಿಣ ದೈಹಿಕ ಕಸರತ್ತು, ಚುರುಕುತನ, ಅಪಾರ ಶಕ್ತಿ ಮತ್ತು ತ್ರಾಣವನ್ನು ಬೇಡುವ ಆಟವಾಗಿದೆ. ಜಾಗತಿಕ ಮಟ್ಟದ ಈ ಸತ್ಯವನ್ನು ಅರಿತು ಸರ್ಕಾರಗಳು ಮತ್ತು ಪ್ರಾಯೋಜಕರು ಹೂಡಿಕೆ ಮಾಡದಿದ್ದರೆ ಕ್ರೀಡೆ ಬೆಳೆಯಲು ಸಾಧ್ಯವಿಲ್ಲ.

ಭಾರತೀಯ ಫುಟ್‌ಬಾಲ್ ಇತಿಹಾಸ ಮೊದಲಿನಿಂದಲೂ ಹೀಗೆಯೇ ಇತ್ತೇ ಎಂದರೆ ಖಂಡಿತಾ ಇಲ್ಲ. ಒಂದು ಕಾಲದಲ್ಲಿ ಜಾಗತಿಕ ಮಟ್ಟದಲ್ಲಿ, ಅದರಲ್ಲೂ ಒಲಿಂಪಿಕ್ಸ್ ನಲ್ಲಿ ಭಾರತದ ಫುಟ್‌ಬಾಲ್ ತಂಡ ಅದ್ಭುತ ಸಾಧನೆ ಮಾಡಿತ್ತು. 1948ರ ಲಂಡನ್ ಒಲಿಂಪಿಕ್ಸ್ ಮತ್ತು 1956ರ ಮೆಲ್ಬೋರ್ನ್ ಒಲಿಂಪಿಕ್ಸ್ ನಲ್ಲಿ ಬಲಿಷ್ಠ ತಂಡಗಳಿಗೆ ನಡುಕ ಹುಟ್ಟಿಸಿದ್ದ ಭಾರತ, 1956ರಲ್ಲಿ ಸೆಮಿಫೈನಲ್ ಪ್ರವೇಶಿಸಿ ಐತಿಹಾಸಿಕ ನಾಲ್ಕನೇ ಸ್ಥಾನ ಪಡೆದಿತ್ತು. ಏಷ್ಯಾದ ಬಲಿಷ್ಠ ತಂಡಗಳಲ್ಲಿ ಒಂದಾಗಿದ್ದ ಆ ಸುವರ್ಣ ಯುಗವನ್ನು ಮತ್ತು ಪರಂಪರೆಯನ್ನು ನಂತರದ ದಿನಗಳಲ್ಲಿ ನಾವು ಸರಿಯಾಗಿ ಮುಂದುವರಿಸಿಕೊಂಡು ಹೋಗುವಲ್ಲಿ ಸಂಪೂರ್ಣವಾಗಿ ವಿಫಲರಾದೆವು.

ಆಧುನಿಕ ಫುಟ್‌ಬಾಲ್ ಕೇವಲ ಪ್ರತಿಭೆಯನ್ನು ಮಾತ್ರವಲ್ಲ, ಅತ್ಯಾಧುನಿಕ ಮೂಲಭೂತ ಸೌಕರ್ಯಗಳನ್ನು ಬೇಡುತ್ತದೆ. ನಮ್ಮಲ್ಲಿ ಗ್ರಾಮೀಣ ಮಟ್ಟದಲ್ಲಿ ಸುಸಜ್ಜಿತ ಮೈದಾನಗಳಿಲ್ಲ, ಸರಿಯಾದ ಬೂಟುಗಳಿಲ್ಲ, ನುರಿತ ತರಬೇತುದಾರರಿಲ್ಲ ಮತ್ತು ಕ್ರೀಡಾ ವಿಜ್ಞಾನದ ಅಳವಡಿಕೆ ಶೂನ್ಯವಾಗಿದೆ. ಯುರೋಪ್ ದೇಶಗಳಲ್ಲಿ ಎಂಟು-ಹತ್ತು ವರ್ಷದ ಮಕ್ಕಳಿದ್ದಾಗಲೇ ಅಕಾಡೆಮಿಗಳಿಗೆ ಸೇರಿಸಿ ತರಬೇತಿ ನೀಡಲಾಗುತ್ತದೆ. ಆದರೆ ನಮ್ಮಲ್ಲಿ ಶಾಲೆ ಮತ್ತು ಕಾಲೇಜು ಮಟ್ಟದಿಂದಲೇ ಪ್ರತಿಭೆಗಳನ್ನು ಗುರುತಿಸಿ ಪೋಷಿಸುವ ವ್ಯವಸ್ಥಿತ ಅಕಾಡೆಮಿಗಳ ತೀವ್ರ ಕೊರತೆ ಎದ್ದು ಕಾಣುತ್ತಿದೆ. ತಳಮಟ್ಟದ ಅಡಿಪಾಯವಿಲ್ಲದೆ ಮೇಲ್ಮಟ್ಟದಲ್ಲಿ ಸಾಧನೆ ಅಸಾಧ್ಯ.

ಆರ್ಥಿಕ ಭದ್ರತೆ ಮತ್ತು ವೃತ್ತಿಪರತೆಯ ಕೊರತೆ ಫುಟ್‌ಬಾಲ್ ಬೆಳವಣಿಗೆಗೆ ದೊಡ್ಡ ಅಡ್ಡಿಯಾಗಿದೆ. ಕ್ರೀಡೆಯೆಂಬುದು ಇಂದು ಬೃಹತ್ ಆರ್ಥಿಕ ಉದ್ದಿಮೆಯಾಗಿದ್ದರೂ, ಭಾರತದಲ್ಲಿ ವೃತ್ತಿಪರ ಕ್ಲಬ್ ಫುಟ್‌ಬಾಲ್ ಸಂಸ್ಕೃತಿ ಇನ್ನೂ ಶೈಶವಾವಸ್ಥೆಯಲ್ಲಿದೆ. ಫುಟ್‌ಬಾಲ್ ಆಡಿದರೆ ಜೀವನ ಭದ್ರವಾಗುತ್ತದೆ ಎಂಬ ನಂಬಿಕೆ ಆಟಗಾರರಾಗಲಿ, ಅವರ ಪೋಷಕರಿಗಾಗಲಿ ಇಲ್ಲ. ಇತ್ತೀಚೆಗೆ ಇಂಡಿಯನ್ ಸೂಪರ್ ಲೀಗ್ (ಐಎಸ್‌ಎಲ್) ನಂತಹ ಕೆಲವು ಟೂರ್ನಿಗಳು ಶುರುವಾಗಿದ್ದರೂ, ಅವುಗಳಿಂದ ಬರುವ ಆರ್ಥಿಕ ನೆರವು ಅಥವಾ ಪ್ರಚಾರ ಗ್ರಾಮೀಣ ಮಟ್ಟದ ನೈಜ ಪ್ರತಿಭೆಗಳಿಗೆ ತಲುಪುವಲ್ಲಿ ವಿಫಲವಾಗಿವೆ.

ಆಧುನಿಕ ಫುಟ್‌ಬಾಲ್ ವೇಗ, ಅಗಾಧ ದೈಹಿಕ ಶಕ್ತಿ ಮತ್ತು 90 ನಿಮಿಷಗಳ ಕಾಲ ಒಂದೇ ಲಯದಲ್ಲಿ ಆಡುವ ಶಕ್ತಿಯನ್ನು ಅವಲಂಬಿಸಿದೆ. ಬಾಲ್ಯದಿಂದಲೇ ನಿರಂತರ ಪೌಷ್ಟಿಕ ಆಹಾರ, ವೈಜ್ಞಾನಿಕ ದೈಹಿಕ ತರಬೇತಿ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕೋಚಿಂಗ್ ಸಿಗದ ಹೊರತು, ಯುರೋಪ್ ಅಥವಾ ಲ್ಯಾಟಿನ್ ಅಮೆರಿಕಾದ ದೈತ್ಯರೊಂದಿಗೆ ಸೆಣಸಾಡುವುದು ಕಷ್ಟ. ಸರ್ಕಾರಗಳು ಕೂಡ ಕ್ರಿಕೆಟ್ ಬಿಟ್ಟು ಫುಟ್‌ಬಾಲ್ ಒಳಗೊಂಡು ಇತರ ಕ್ರೀಡೆಗಳತ್ತ ಗಮನಹರಿಸಬೇಕಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR